

Volume : 9 | Issue : 180 | October : 04 : 2026 : Sunday
ಸಂಪುಟ : 9 | ಸಂಚಿಕೆ : 180 | ಅಕ್ಟೋಬರ್ : 04 : 2026 : ಭಾನುವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ | VIKRAMA VAHINI
PRGI NO: KARKAN/2018/78481



ಮುಂಬೈನಲ್ಲಿ ನಡೆದ 'ಡರ್ಟಿ ಮ್ಯಾಗಜೀನ್' ಫ್ಯಾಷನ್ ಕಾರ್ಯಕ್ರಮದಲ್ಲಿ ಗೋಥಿಕ್ ಶೈಲಿಯ ಕಪ್ಪು ಉಡುಪಿನಲ್ಲಿ ಮಿಂಚಿದ ಮಲಯಾಳಂ ನಟಿ ಪಾರ್ವತಿ ತಿರುವೋತ್.

ರಾಜ್ಯಕ್ಕೆ 3705.30 ಕೋಟಿ ರೂ. ಬರ ಪರಿಹಾರ ನೀಡಿ: ಸಿಎಂ ಡಿಕೆಶಿ ಪುಟ 3

ರಾಜ್ಯದ 217 ತಾಲೂಕುಗಳು ಬರಪೀಡಿತ: ರೂ 7,142 ಕೋಟಿ ಪರಿಹಾರಕ್ಕೆ ಮನವಿ ಪುಟ 4

# 'ನನಗೆ ಹೆಣ್ಣು ಹುಡುಕಿಕೊಡಿ'

## ಪಿರಿಯಾಪಟ್ಟಣದಲ್ಲಿ 'ಬಾಗಿಲಿಗೆ ಬಂತು ಸರ್ಕಾರ' ಕಾರ್ಯಕ್ರಮ; ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಎದುರಾಯಿತು ವಿಭಿನ್ನ ಸವಾಲು

**ಪಿರಿಯಾಪಟ್ಟಣದಲ್ಲಿ 'ಬಾಗಿಲಿಗೆ ಬಂತು ಸರ್ಕಾರ' ಕಾರ್ಯಕ್ರಮದಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದ ಸಿಎಂ ಡಿ.ಕೆ. ಶಿವಕುಮಾರ್; ಪಿಂಚಣಿ, ರೈತರ ಸಾಲ, ತಂಬಾಕು ಬೆಲೆ, ಖಾತೆ ಬದಲಾವಣೆ ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಪರಿಹಾರ ಸೂಚನೆ. ಈ ವೇಳೆ ಯುವ ರೈತನೊಬ್ಬ 'ನನಗೆ ಹೆಣ್ಣು ಹುಡುಕಿಕೊಡಿ ಸಿಎಂ ಸಾರ್' ಎಂದು ಮನವಿ ಸಲ್ಲಿಸಿದ್ದು ಗಮನ ಸೆಳೆಯಿತು. ಸರತಿ ಸಾಲಿನಲ್ಲಿದ್ದ ಕೊನೆಯ ಅರ್ಜಿದಾರನ ಮನವಿಯನ್ನೂ ಖುದ್ದಾಗಿ ಸ್ವೀಕರಿಸಿದ ಸಿಎಂ, ಅಧಿಕಾರಿಗಳು ಯಾವುದೇ ಅರ್ಜಿಯನ್ನು ಬಾಕಿ ಉಳಿಸದೆ ತ್ವರಿತವಾಗಿ ವಿಲೇವಾರಿ ಮಾಡುವಂತೆ ಸೂಚಿಸಿದರು. ಲಕ್ಷ್ಮಣತೀರ್ಥ ನದಿ ಮಾಲಿನ್ಯ, ಪಡಿತರ ಚೀಟಿ ಹಾಗೂ ಗ್ರಾಮ ವಿದ್ಯುತ್ ಪ್ರತಿನಿಧಿಗಳ ಸೇವೆ ಖಾಯಂಗೊಳಿಸುವ ಬೇಡಿಕೆಗಳ ಬಗ್ಗೆಯೂ ಅಧಿಕಾರಿಗಳಿಂದ ಮಾಹಿತಿ ಪಡೆದರು. ತಂಬಾಕು ಬೆಳೆಗಾರರಿಗೆ ಸೂಕ್ತ ಬೆಲೆ ದೊರಕಿಸುವ ಕುರಿತು ಕೇಂದ್ರಕ್ಕೆ ಮನವಿ ಸಲ್ಲಿಸುವುದಾಗಿ ಶಾಸಕ ವೆಂಕಟೇಶ್ ಭರವಸೆ ನೀಡಿದರು. ಅಹವಾಲು ಸ್ವೀಕಾರಕ್ಕೂ ಮುನ್ನ ವನ್ಯಜೀವಿ ಸಂರಕ್ಷಣಾ ಮೊಬೈಲ್ ಪ್ರಚಾರ ವಾಹನವನ್ನು ಸಿಎಂ ಲೋಕಾರ್ಪಣೆಗೊಳಿಸಿದರು.**

● ವಿಕ್ರಮ ವಾಹಿನಿ । ಮೈಸೂರು

ಪಿರಿಯಾಪಟ್ಟಣದಲ್ಲಿ ನಡೆದ 'ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ಸ್ಥಳದಲ್ಲೇ ಹಲವು ಸಮಸ್ಯೆಗಳಿಗೆ ಪರಿಹಾರ ಸೂಚಿಸಿದರು. ಇದೇ ವೇಳೆ ಯುವ ರೈತನೊಬ್ಬ 'ನನಗೆ ಹೆಣ್ಣು ಹುಡುಕಿಕೊಡಿ ಸಿಎಂ ಸಾರ್' ಎಂದು ಮನವಿ ಸಲ್ಲಿಸಿದ್ದು, ಕೆಲಕಾಲ ನಗುವಿನ ವಾತಾವರಣ ಸೃಷ್ಟಿಸಿತು.

ಪಿಂಚಣಿ ಅರ್ಜಿ ಬಾಕಿ ಉಳಿಸದಂತೆ ಸೂಚನೆ

ವೃದ್ಧಾಪ್ಯ, ಅಂಗವಿಕಲ ಸೇರಿದಂತೆ ವಿವಿಧ ಪಿಂಚಣಿ ಯೋಜನೆಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಅಧಿಕಾರಿಗಳು ಬಾಕಿ ಉಳಿಸಿಕೊಳ್ಳಬಾರದು. ಮುಂದಿನ ಬಾರಿ ತಾವು ಭೇಟಿ ನೀಡಿದಾಗ ಪಿಂಚಣಿ ಸಮಸ್ಯೆ ಹೊತ್ತು ಯಾರೂ ಬಾರದಂತೆ ಕ್ರಮ ಕೈಗೊಳ್ಳಬೇಕು. ಅಶಕ್ತರಿಗೆ ಅಗತ್ಯ ನೆರವು ಒದಗಿಸುವುದು ಅಧಿಕಾರಿಗಳ ಜವಾಬ್ದಾರಿ ಎಂದು ಸಿಎಂ ಸೂಚಿಸಿದರು.

**ಲಕ್ಷ್ಮಣತೀರ್ಥ ಮಾಲಿನ್ಯ; ವರದಿಗೆ ಸೂಚನೆ:** ಕಾವೇರಿ ನದಿಯ ಉಪನದಿ ಲಕ್ಷ್ಮಣತೀರ್ಥ ಮಲೀನಗೊಂಡಿದ್ದು, ಜನರು ಅದೇ ನೀರನ್ನು ಬಳಸುತ್ತಿದ್ದಾರೆ ಎಂದು ಹುಣಸೂರಿನ ಸತ್ಯಪ್ಪ ಮನವಿ ಸಲ್ಲಿಸಿದರು. ಈ ಕುರಿತು ಸಮಗ್ರ ವರದಿ ನೀಡುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚಿಸಿದರು.

**ತಂಬಾಕು ಬೆಲೆ, ರೈತರ ಸಾಲದ ಸಮಸ್ಯೆ:** ತಂಬಾಕಿಗೆ ಸೂಕ್ತ ಬೆಲೆ ದೊರಕಿಸಬೇಕು ಎಂದು ರೈತರು ಮನವಿ ಮಾಡಿದಾಗ, ಶಾಸಕ ವೆಂಕಟೇಶ್ ಅವರು ಪರಿಸ್ಥಿತಿಯನ್ನು ವಿವರಿಸಿದರು. ಕೇಂದ್ರ ಸಚಿವರಿಗೆ ಈ ಕುರಿತು ಮನವಿ ಸಲ್ಲಿಸುವುದಾಗಿ ಅವರು ತಿಳಿಸಿದ್ದು, ಇದಕ್ಕೆ ಸಿಎಂ ಸಮ್ಮತಿ ಸೂಚಿಸಿದರು. ಕರ್ನಾಟಕ ಗ್ರಾಮೀಣ ಬ್ಯಾಂಕ್‌ನಲ್ಲಿ 7 ಲಕ್ಷ ಸಾಲ ಮಾಡಿದ್ದು, ಬೆಳೆ ನಷ್ಟದಿಂದ ಸಾಲ ತೀರಿಸಲು ಸಾಧ್ಯವಾಗದೆ ಬ್ಯಾಂಕ್ ನೋಟಿಸ್ ನೀಡಿದೆ ಎಂದು ರೈತ ರಾಜೇಗೌಡ ಅಳಲು ತೋಡಿಕೊಂಡರು. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಹಶೀಲ್ದಾರ್‌ಗೆ ಸಿಎಂ ಸೂಚಿಸಿದರು.

**ನೇಮಕಾತಿ ಆದೇಶ ಮನೆಗೆ:** ಕೃಷಿ ಮಾರುಕಟ್ಟೆ ಇಲಾಖೆಯ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ನೇಮಕಗೊಂಡ ಮಹೇಶ್ ಅವರಿಗೆ ಶೀಘ್ರದಲ್ಲೇ ನೇಮಕಾತಿ ಆದೇಶದ ಪ್ರತಿ ಮನೆಗೆ ತಲುಪಲಿದೆ ಎಂದು ಸಿಎಂ ಭರವಸೆ ನೀಡಿದರು. ಯುವಕರ ಪರವಾಗಿ ಸರ್ಕಾರ ಇದೆ ಎಂದು ಆತ್ಮಸ್ಥೈರ್ಯ ತುಂಬಿದರು.

**ವಿವಿಧ ಬೇಡಿಕೆಗಳ ಮನವಿ:** ಹಾರನಹಳ್ಳಿಯ ವೀಣಾ ಮತ್ತು ಕಮಲಮ್ಮ ಕೃಷಿ ಭೂಮಿಯ ಖಾತೆ ಮಾಡಿಕೊಡುವಂತೆ ಮನವಿ ಸಲ್ಲಿಸಿದರು. ಬೈಲುಕುಪ್ಪೆಯ ಶಾಹಿರ್ ಅವರು ತಂದೆಯ ಆರೋಗ್ಯ ತಪಾಸಣೆಗೆ ಅನುಕೂಲವಾಗುವಂತೆ ಪಡಿತರ ಚೀಟಿ ನೀಡುವಂತೆ ಕೋರಿದರು. ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಿಎಂ ಸೂಚಿಸಿದರು.

ಗ್ರಾಮ ವಿದ್ಯುತ್ ಪ್ರತಿನಿಧಿಗಳಾದ ಪ್ರಭಾಕರ್, ನಾಗರಾಜು, ಸುರೇಶ್, ಗಣೇಶ್ ಹಾಗೂ ಮಂಜು ಅವರು 15–20 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು, ತಮ್ಮನ್ನು ಖಾಯಂಗೊಳಿಸುವಂತೆ ಮನವಿ ಮಾಡಿದರು. ಈ ಕುರಿತು ಸಚಿವ ಸಂಪುಟದಲ್ಲಿ ತೀರ್ಮಾನವಾಗಬೇಕು. ಇದು ತಮ್ಮೊಬ್ಬರ ತೀರ್ಮಾನವಲ್ಲ ಎಂದು ಸಿಎಂ ತಿಳಿಸಿದರು.




ಕೊನೆಯ ಅರ್ಜಿದಾರನ ಮನವಿಯನ್ನೂ ಪಡೆದರು

ಅಹವಾಲು ಸ್ವೀಕಾರಕ್ಕೂ ಮುನ್ನ ವನ್ಯಜೀವಿ ಸಂರಕ್ಷಣಾ ಮೊಬೈಲ್ ಪ್ರಚಾರ ವಾಹನವನ್ನು ಸಿಎಂ ಲೋಕಾರ್ಪಣೆಗೊಳಿಸಿದರು. ಬಳಿಕ ಅಹವಾಲು ಕೇಂದ್ರಗಳಿಗೆ ತೆರಳಿ ಕಾರ್ಯವೈಖರಿ ಪರಿಶೀಲಿಸಿ, ಯಾವ ಸಮಸ್ಯೆಗಳ ಕುರಿತು ಹೆಚ್ಚು ಅರ್ಜಿಗಳು ಬಂದಿವೆ ಎಂಬ ಮಾಹಿತಿ ಪಡೆದರು. ಸರತಿ ಸಾಲಿನಲ್ಲಿ ನಿಂತಿದ್ದ ಕೊನೆಯ ಅರ್ಜಿದಾರನ ಮನವಿಯನ್ನೂ ಖುದ್ದಾಗಿ ಸ್ವೀಕರಿಸಿದ ಬಳಿಕವೇ ಸಿಎಂ ಕಾರ್ಯಕ್ರಮ ಮುಕ್ತಾಯಗೊಳಿಸಿದರು. ಅಹವಾಲುದಾರರನ್ನು ಕಾಯಿಸಬಾರದು ಎಂದು ಕೇವಲ 10 ನಿಮಿಷದಲ್ಲಿ ಊಟ ಮುಗಿಸಿ ಕಾರ್ಯಕ್ರಮಕ್ಕೆ ಆಗಮಿಸಿದ ಅವರ ನಡೆ ಸಭಿಕರ ಗಮನ ಸೆಳೆಯಿತು.

## ■ ಸುದ್ದಿ ಚುಟುಕು

### ಪಾಕ್ ಉಗ್ರನ ಸಂಪರ್ಕ ಶಂಕೆ: ಬೀದರ್ ಯುವಕ ಬಂಧನ

● ವಿಕ್ರಮ ವಾಹಿನಿ । ಬೀದರ್

ಪಾಕಿಸ್ತಾನ ಮೂಲದ ಘೋಷಿತ ಉಗ್ರ ಶಹಜಾದ್ ಭಟ್ಟಿ ಹಾಗೂ ಇತರರೊಂದಿಗೆ ಸಂಪರ್ಕ ಹೊಂದಿರುವ ಶಂಕೆಯ ಮೇರೆಗೆ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಯಣಕೂರ ಗ್ರಾಮದ ವಿಶಾಲ್ ಮೇತ್ರೆ ಎಂಬ ಯುವಕನನ್ನು ಬಂಧಿಸಿದೆ.

ಬೀದರ್ ಪೊಲೀಸರ ಸಹಕಾರದೊಂದಿಗೆ ಕಾರ್ಯಾಚರಣೆ ನಡೆಸಿದ ಎನ್‌ಐಎ ಅಧಿಕಾರಿಗಳು, ಅಕ್ರಮ ಚಟುವಟಿಕೆಗಳ ತಡೆ ಕಾಯ್ದೆ (ಯುಎಪಿಎ) ಅಡಿ ವಿಶಾಲ್ ಮೇತ್ರೆಯನ್ನು ಬಂಧಿಸಿದ್ದಾರೆ. ಶಹಜಾದ್ ಭಟ್ಟಿ, ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ಹೊರಬಂದು ಪಾಕಿಸ್ತಾನ ಪರ ಉಗ್ರ ಚಟುವಟಿಕೆಗಳಲ್ಲಿ ತೊಡಗಿದ್ದಾನೆ ಎಂಬ ಮಾಹಿತಿ ಹಿನ್ನೆಲೆಯಲ್ಲಿ ತನಿಖೆ ನಡೆಯುತ್ತಿದೆ.

ವಿಶಾಲ್ ಮೇತ್ರೆಗೆ ಈ ಹಿಂದೆ ಅಪರಾಧ ಹಿನ್ನೆಲೆ ಇತ್ತು ಎನ್ನಲಾಗಿದ್ದು, ಬಂಧನದ ಬಳಿಕ ನ್ಯಾಯಾಲಯದ ಪ್ರಕ್ರಿಯೆ ನಡೆಯುತ್ತಿದೆ. ನ್ಯಾಯಾಲಯದ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಪ್ರಕರಣಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿಯನ್ನು ನೀಡಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದ್ದಾರೆ.

### ಕರಾವಳಿ, ಮಲೆನಾಡು ಭಾಗದಲ್ಲಿ 10 ದಿನ ವ್ಯಾಪಕ ಮಳೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಕರಾವಳಿ ಮತ್ತು ಮಲೆನಾಡು ಭಾಗದ 8ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಮುಂದಿನ 10 ದಿನಗಳ ಕಾಲ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.

ಕೇರಳ ಕಾಸರಗೋಡು ಸೇರಿದಂತೆ ರಾಜ್ಯದ ಕರಾವಳಿ ಮತ್ತು ಮಲೆನಾಡಿನ ಘಟ್ಟ ಪ್ರದೇಶಗಳಲ್ಲಿ ಸಂಜೆ ವೇಳೆ ಗುಡುಗು ಸಹಿತ ಮಳೆ ಸುರಿಯಲಿದೆ. ಕರಾವಳಿಯ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳು, ಮಲೆನಾಡಿನ ಕೊಡಗು, ಹಾಸನ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳು ಹಾಗೂ ಬೆಂಗಳೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಅಧಿಕ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

ಇನ್ನು, ಉತ್ತರ ಕರ್ನಾಟಕದಲ್ಲಿ ಒಣಹವೆ ಮುಂದುವರೆಯಲಿದೆ ಎಂದು ಇಲಾಖೆ ವಿವರಿಸಿದೆ.

ರಾಜ್ಯದಲ್ಲಿ ಈಗಾಗಲೇ ಮುಂಗಾರು ಮಳೆ ಸಂಪೂರ್ಣವಾಗಿ ಹಿಂದೆ ಸರಿದಿದ್ದು, ಅಕ್ಟೋಬರ್ 15ರ ನಂತರ ಹಿಂಗಾರು ಮಳೆ ಆಗಮಿಸಲಿದೆ. ಮುಂಗಾರು ಮಳೆ ಅವಧಿಯಲ್ಲಿ ಮಳೆ ಕೊರತೆ ಉಂಟಾಗಿತ್ತು. ಹಿಂಗಾರು ಮಳೆಯಾದರೂ ಸರಾಸರಿಯಷ್ಟು ಸುರಿಯಬಹುದು ಎಂಬ ನಿರೀಕ್ಷೆಯಿದೆ.

### ಫರೀದಾಬಾದ್‌ನಲ್ಲಿ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ

● ವಿಕ್ರಮ ವಾಹಿನಿ । ಫರೀದಾಬಾದ್ (ಹರಿಯಾಣ)

ಟ್ಯೂಷನ್ ಮುಗಿಸಿ 16 ವರ್ಷದ ಸ್ನೇಹಿತನನ್ನು ಭೇಟಿಯಾಗಲು ತೆರಳಿದ್ದ 13 ವರ್ಷದ ಬಾಲಕಿ ಮೇಲೆ ಯುವಕರ ಗುಂಪೊಂದು ಸಾಮೂಹಿಕ ಅತ್ಯಾಚಾರ ಎಸಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆಗಸ್ಟ್ 24ರಂದು ಗ್ರೇಟರ್ ಫರೀದಾಬಾದ್ ಪ್ರದೇಶದ ಪಾಳುಬಿದ್ದ ಕಟ್ಟಡದಲ್ಲಿ ಘಟನೆ ನಡೆದಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಕುನಾಲ್, ಯಶ್ ಹಾಗೂ ದೀಪಕ್ ಎಂಬ ಮೂವರನ್ನು ಪೊಲೀಸರು ಬಂಧಿಸಿದ್ದಾರೆ. ಮತ್ತೊಬ್ಬ ಆರೋಪಿಗಾಗಿ ಶೋಧ ಮುಂದುವರಿದಿದೆ.

ಪೊಲೀಸರ ಪ್ರಕಾರ, ಬಾಲಕಿ ಹಾಗೂ ಆಕೆಯ 16 ವರ್ಷದ ಸ್ನೇಹಿತನನ್ನು ಯುವಕರ ಗುಂಪೊಂದು ಹಿಂಬಾಲಿಸಿ ತಡೆದಿದೆ. ಬಳಿಕ ಬೆದರಿಸಿ ಇಬ್ಬರನ್ನೂ ಶಿಥಿಲಗೊಂಡ ಕಟ್ಟಡಕ್ಕೆ ಕರೆದೊಯ್ದು, ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಲಾಗಿದೆ. ಸುಮಾರು ಒಂದು ತಿಂಗಳ ಬಳಿಕ ಸೆ.28ರಂದು ಬಾಲಕಿಯ ಕುಟುಂಬ ದೂರು ನೀಡಿದ್ದು, ಸೆ.29ರಂದು ಎಫ್‌ಐಆರ್ ದಾಖಲಿಸಲಾಗಿದೆ. ಘಟನೆ ಬಳಿಕ ಬಾಲಕಿ ಮಾನಸಿಕವಾಗಿ ಒತ್ತಡಕ್ಕೆ ಒಳಗಾಗಿದ್ದಳು. ಇದನ್ನು ಗಮನಿಸಿದ ತಾಯಿ ವಿಚಾರಿಸಿದಾಗ ಬಾಲಕಿ ನಡೆದ ಘಟನೆಯನ್ನು ವಿವರಿಸಿದ್ದಾಳೆ. ನಂತರ ಕುಟುಂಬಸ್ಥರು ಪೊಲೀಸರನ್ನು ಸಂಪರ್ಕಿಸಿದ್ದಾರೆ.

ಇದೇ ವೇಳೆ, ಬಾಲಕನ ಮೇಲೂ ಲೈಂಗಿಕ ದೌರ್ಜನ್ಯ ನಡೆದಿದೆ ಎಂಬ ಆರೋಪ ಕೇಳಿಬಂದಿದ್ದು, ಅದು ಇನ್ನೂ ದೃಢಪಟ್ಟಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಸಂತ್ರಸ್ತರನ್ನು ಸ್ಥಳದಲ್ಲಿ ಬಂಧಿಸಿಡಲಾಗಿತ್ತು ಹಾಗೂ ಆರೋಪಿಗಳಲ್ಲೊಬ್ಬ ಬಾಲಕಿಯ ಕುಟುಂಬದ ಬ್ಯಾಂಕ್ ಖಾತೆಯಿಂದ 10,000 ತನ್ನ ಖಾತೆಗೆ ವರ್ಗಾಯಿಸಿಕೊಂಡಿದ್ದಾನೆ ಎಂಬ ಆರೋಪದ ಬಗ್ಗೆಯೂ ತನಿಖೆ ನಡೆಯುತ್ತಿದೆ.

## ಎಸ್‌ಐಆರ್ ಅಕ್ರಮ ತನಿಖೆಗೆ ಎಸ್‌ಐಟಿ ರಚನೆ?

● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ತನಿಖೆ ನಡೆಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವ ಬಗ್ಗೆ ರಾಜ್ಯ ಸರ್ಕಾರ ಚಿಂತನೆ ನಡೆಸಿದೆ.

ಎಸ್‌ಐಟಿ ರಚನೆಗೆ ಸಂಬಂಧಿಸಿದ ಪ್ರಸ್ತಾವನೆ ಈಗಾಗಲೇ ಸಚಿವ ಸಂಪುಟದ ಅಜೆಂಡಾದಲ್ಲಿ ಸೇರಿಸಲಾಗಿದ್ದು, ಮಂಗಳವಾರ ನಡೆಯಲಿರುವ ಸಂಪುಟ ಸಭೆಯಲ್ಲಿ ಈ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ. ಸಚಿವರ ಅಭಿಪ್ರಾಯ ಪಡೆದು ಮುಂದಿನ ಕ್ರಮ ಕೈಗೊಳ್ಳಲು ಸರ್ಕಾರ ಮುಂದಾಗಿದೆ.

ಎಸ್‌ಐಆರ್ ವೇಳೆ ಮತದಾರರ ಹೆಸರುಗಳನ್ನು ಅಕ್ರಮವಾಗಿ ತೆಗೆದುಹಾಕಲು ಯತ್ನಿಸಲಾಗಿದೆ ಎಂಬ ಆರೋಪಗಳ ಕುರಿತು ಐದು ಖಾಸಗಿ ವ್ಯಕ್ತಿಗಳು ದೂರು ನೀಡಿದ್ದು, ಈ ಸಂಬಂಧ ಎಫ್‌ಐಆರ್ ದಾಖಲಾಗುವ ಸಾಧ್ಯತೆಯಿದೆ.



ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ತನಿಖೆಗೆ ಎಸ್‌ಐಟಿ ರಚಿಸುವ ಕುರಿತು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಸಚಿವ ಸಂಪುಟದ ಅಜೆಂಡಾದಲ್ಲಿ ಪ್ರಸ್ತಾವನೆ ಸೇರಿದ್ದು, ಮಂಗಳವಾರದ ಸಭೆಯಲ್ಲಿ ಚರ್ಚೆ ಸಾಧ್ಯತೆ. ಐದು ಖಾಸಗಿ ವ್ಯಕ್ತಿಗಳ ದೂರು ಆಧರಿಸಿ ಎಫ್‌ಐಆರ್ ದಾಖಲಾದ ಬಳಿಕ ಎಸ್‌ಐಟಿ ರಚನೆ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ಎಫ್‌ಐಆರ್ ದಾಖಲಾಗಿದ ಬಳಿಕ ಪ್ರಕರಣದ ಸ್ವರೂಪವನ್ನು ಪರಿಶೀಲಿಸಿ ಎಸ್‌ಐಟಿ ರಚನೆಯ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ಈ ಕುರಿತು ಮಾಹಿತಿ ನೀಡುವಂತೆ ಕಂದಾಯ ಮತ್ತು ಗೃಹ ಇಲಾಖೆಗೆ ಸೂಚಿಸಲಾಗಿದ್ದು, ಎಸ್‌ಐಟಿ ರಚನೆಯಾದರೆ ಹಿರಿಯ ಪೊಲೀಸ್ ಅಧಿಕಾರಿಯ ನೇತೃತ್ವದಲ್ಲಿ ತನಿಖೆ ನಡೆಸುವ ಸಾಧ್ಯತೆಯಿದೆ. ಎಡಿಜಿಪಿ ಮಟ್ಟದ ಅಧಿಕಾರಿಯನ್ನು ತನಿಖೆಯ ನೇತೃತ್ವಕ್ಕೆ ನೇಮಿಸುವ ಬಗ್ಗೆಯೂ ಚರ್ಚೆ ನಡೆದಿದೆ ಎಂದು ಮೂಲಗಳು ತಿಳಿಸಿವೆ.

ಇದೇ ವೇಳೆ ಅಳಂದ ಪ್ರಕರಣದ ತನಿಖಾ ಪ್ರಗತಿ ಹಾಗೂ ಎಸ್‌ಐಆರ್‌ಗೆ ಸಂಬಂಧಿಸಿದ ದೂರುಗಳ ಬಗ್ಗೆಯೂ ಮುಖ್ಯಮಂತ್ರಿ ಮಾಹಿತಿ ಪಡೆದಿದ್ದಾರೆ. ಈಗಾಗಲೇ ನಡೆದಿರುವ ತನಿಖೆಗಳ ವಿವರ ಪರಿಶೀಲಿಸಿದ ಬಳಿಕ ಸರ್ಕಾರ ಮುಂದಿನ ಹೆಜ್ಜೆ ಇಡುವ ಸಾಧ್ಯತೆಯಿದೆ.

## ಗುತ್ತಿಗೆದಾರರ ಬಾಕಿಗೆ ರೂ 2,400 ಕೋಟಿ ಬಿಡುಗಡೆ

**ಗುತ್ತಿಗೆದಾರರ ಬಾಕಿ ಬಿಲ್‌ಗಳ ಪಾವತಿ ವಿಚಾರ ತೀವ್ರಗೊಂಡಿರುವ ಬೆನ್ನಲ್ಲೇ ರಾಜ್ಯ ಸರ್ಕಾರ ಕಳೆದ ಮೂರು ದಿನಗಳಲ್ಲಿ ನೀರಾವರಿ ಇಲಾಖೆಗೆ ರೂ 2,400 ಕೋಟಿ ಬಿಡುಗಡೆ ಮಾಡಿದೆ. ಸುಮಾರು ರೂ 38 ಸಾವಿರ ಕೋಟಿ ಬಾಕಿ ಇರುವುದಾಗಿ ಗುತ್ತಿಗೆದಾರರ ಸಂಘದ ಅಂದಾಜು; ನವೆಂಬರ್‌ನಲ್ಲಿ ರಾಜ್ಯಾದ್ಯಂತ ಹೋರಾಟದ ಎಚ್ಚರಿಕೆ. ನೀರಾವರಿ ಬಳಿಕ ಲೋಕೋಪಯೋಗಿ ಇಲಾಖೆಯ ಬಾಕಿಗೂ ಹಣ ಬಿಡುಗಡೆ ಸಾಧ್ಯತೆ.**

● ವಿಕ್ರಮ ವಾಹಿನಿ । ಬೆಂಗಳೂರು

ಗುತ್ತಿಗೆದಾರರ ಬಾಕಿ ಬಿಲ್‌ಗಳ ವಿಚಾರ ತೀವ್ರಗೊಂಡಿರುವ ಬೆನ್ನಲ್ಲೇ ರಾಜ್ಯ ಸರ್ಕಾರ ಕಳೆದ ಮೂರು ದಿನಗಳಲ್ಲಿ ನೀರಾವರಿ ಇಲಾಖೆಗೆ ರೂ 2,400 ಕೋಟಿ ಬಿಡುಗಡೆ ಮಾಡಿದೆ. ಸುಮಾರು ರೂ 38 ಸಾವಿರ ಕೋಟಿ ಬಾಕಿ ಪಾವತಿಸುವಂತೆ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ ಒತ್ತಾಯಿಸಿ, ನವೆಂಬರ್‌ನಲ್ಲಿ ರಾಜ್ಯಾದ್ಯಂತ ಹೋರಾಟದ ಎಚ್ಚರಿಕೆ ನೀಡಿರುವ ಸಂದರ್ಭದಲ್ಲೇ ಸರ್ಕಾರದ ಈ ಕ್ರಮ ನಡೆದಿದೆ.

ಸಂಘದ ಅಧ್ಯಕ್ಷ ಆರ್. ಮಂಜುನಾಥ್ ಮಾತನಾಡಿ, ಬಿಡುಗಡೆಯಾಗಿರುವ ಮೊತ್ತ ಒಟ್ಟು ಬಾಕಿಗೆ ಹೋಲಿಸಿದರೆ ಶೇ.10ಕ್ಕಿಂತಲೂ ಕಡಿಮೆ. ಮೂರು–ನಾಲ್ಕು ತಿಂಗಳಿಗೊಮ್ಮೆ ಅಲ್ಪ ಮೊತ್ತ ಬಿಡುಗಡೆ ಮಾಡುವ ಬದಲು ಬಾಕಿಯನ್ನು ಸಮರ್ಪಕವಾಗಿ ಪಾವತಿಸಬೇಕು ಎಂದು ಒತ್ತಾಯಿಸಿದ್ದಾರೆ. ಬಾಕಿ ಹಣದ ಮೇಲಿನ ಸಾಲದ ಹೊರೆ ಹೆಚ್ಚುತ್ತಿರುವುದರಿಂದ ಗುತ್ತಿಗೆದಾರರು ಸಂಕಷ್ಟದಲ್ಲಿದ್ದಾರೆ ಎಂದು ತಿಳಿಸಿದ್ದಾರೆ.

ಸಂಘದ ಅಂದಾಜಿನಂತೆ ಪ್ರಮುಖ ಮತ್ತು ಮಧ್ಯಮ ನೀರಾವರಿ ಇಲಾಖೆಯಲ್ಲಿ ರೂ 14 ಸಾವಿರ ಕೋಟಿ, ಲೋಕೋಪಯೋಗಿ ಇಲಾಖೆಯಲ್ಲಿ ರೂ 8,370 ಕೋಟಿ, ಸಣ್ಣ ನೀರಾವರಿಯಲ್ಲಿ ರೂ 3,600 ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರೂ 3,000 ಕೋಟಿ, ವಸತಿ ಮತ್ತು ವಕ್ಫ್ ಇಲಾಖೆಯಲ್ಲಿ ರೂ 2,600 ಕೋಟಿ, ಜಿಬಿಎದಲ್ಲಿ ರೂ 2,600 ಕೋಟಿ, ಕಾರ್ಮಿಕ ಇಲಾಖೆಯಲ್ಲಿ ರೂ 2,000 ಕೋಟಿ ಹಾಗೂ ನಗರಾಭಿವೃದ್ಧಿ ಇಲಾಖೆಯಲ್ಲಿ ರೂ 1,800 ಕೋಟಿ ಬಾಕಿ ಇದೆ. ಈ ಲೆಕ್ಕಾಚಾರವನ್ನು ಅಧಿಕಾರಿಗಳು ಪ್ರಶ್ನಿಸಿದ್ದು, ಕೆಲವು ಮೊತ್ತಗಳಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಅಂದಾಜು ಸೇರಿರಬಹುದು ಎಂದು ತಿಳಿಸಿದ್ದಾರೆ.

ನೀರಾವರಿ ಇಲಾಖೆಯ ಬಳಿಕ ಲೋಕೋಪಯೋಗಿ ಇಲಾಖೆಯ ಗುತ್ತಿಗೆದಾರರ ಬಾಕಿಗೂ ಹಣ ಬಿಡುಗಡೆ ಮಾಡುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹಣಕಾಸು ಇಲಾಖೆ ನಿರಾಕ್ಷೇಪಣಾ ಪತ್ರ ನೀಡಿದ ಬಳಿಕ ಪ್ರಕ್ರಿಯೆ ಆರಂಭವಾಗಬಹುದು. ಮುಂದಿನ ತ್ರೈಮಾಸಿಕದ ಅನುದಾನವನ್ನು ಮುಂಚಿತವಾಗಿ ಬಿಡುಗಡೆ ಮಾಡಿ, ಅದರ ಒಂದು ಭಾಗವನ್ನು ಬಾಕಿ ಪಾವತಿಗೆ ಬಳಸುವ ಅವಕಾಶ ನೀಡಲಾಗಿದೆ ಎಂದು ವರದಿಯಾಗಿದೆ.

ಬಾಕಿ ಪಾವತಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳ ಕಚೇರಿ ಗುತ್ತಿಗೆದಾರರ ಸಂಘದೊಂದಿಗೆ ಸಭೆ ನಡೆಸಲು ಮುಂದಾಗಿದೆ. ಇದೇ ವೇಳೆ ನವೆಂಬರ್‌ನಲ್ಲಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುವುದಾಗಿ ಸಂಘ ಎಚ್ಚರಿಸಿದ್ದು, ಬಾಕಿ ಪಾವತಿಯಾಗದಿದ್ದರೆ ಡಿಸೆಂಬರ್‌ನಲ್ಲಿ ಟೆಂಡರ್‌ಗಳಲ್ಲಿ ಅಕ್ರಮ ಕಮಿಷನ್ ಆರೋಪಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಬಿಡುಗಡೆ ಮಾಡುವುದಾಗಿ ತಿಳಿಸಿದೆ.

## ಬಿಜೆಪಿ ಜಿಲ್ಲಾಧ್ಯಕ್ಷರ ವಿರುದ್ಧ ಅತ್ಯಾಚಾರ ಆರೋಪ

● ವಿಕ್ರಮ ವಾಹಿನಿ । ಬಲ್ಲಿಯಾ (ಉ.ಪ್ರ.)

*ಬಿಜೆಪಿ ಮಹಿಳಾ ನಾಯಕಿಯೊಬ್ಬರು ಪಕ್ಷದ ಬಲ್ಲಿಯಾ ಜಿಲ್ಲಾಧ್ಯಕ್ಷ ಸಂಜಯ್ ಮಿಶ್ರಾ ತಮ್ಮ ಮೇಲೆ ಪದೇಪದೇ ಅತ್ಯಾಚಾರ ಎಸಗಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಈ ಕುರಿತು ಸೆ.28ರಂದು ಹೆಚ್ಚುವರಿ ಮುಖ್ಯ ನ್ಯಾಯಿಕ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಅಫಿಡವಿಟ್ ಸಲ್ಲಿಸಿದ್ದಾರೆ. ತಮ್ಮ ಖಾಸಗಿ ಫೋಟೊ ಹಾಗೂ ವಿಡಿಯೊಗಳನ್ನು ವಾಟ್ಸ್‌ಆ್ಯಪ್‌ನಲ್ಲಿ ಹರಡಿದ ಆರೋಪದಡಿ ಸೆ.15ರಂದು ಕೆಲ ಸ್ಥಳೀಯ ಬಿಜೆಪಿ ಪದಾಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿತ್ತು.*

*ಆದರೆ, ಆರಂಭಿಕ ದೂರಿನಲ್ಲಿ ಸಂಜಯ್ ಮಿಶ್ರಾ ಅವರ ಹೆಸರಿದ್ದರೂ ಪೊಲೀಸರು ನಂತರ ದಾಖಲಿಸಿದ ದೂರಿನಿಂದ ಅವರ ಹೆಸರು ಕೈಬಿಡಲಾಗಿದೆ ಎಂದು ಮಹಿಳೆ ಆರೋಪಿಸಿದ್ದಾರೆ.*

*ತಮ್ಮ ಹೇಳಿಕೆಯನ್ನು ಪೊಲೀಸರು ದಾಖಲಿಸಿಲ್ಲ. ಮತ್ತೊಂದು ದೂರು ನೀಡುವಂತೆ ಒತ್ತಡ ಹೇರಲಾಗಿದ್ದು, ಬೆದರಿಕೆ ಹಾಗೂ ಕಿರುಕುಳ ಎದುರಿಸುತ್ತಿದ್ದೇನೆ ಎಂದು ಮಹಿಳೆ ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ.*

*ಸಂಜಯ್ ಮಿಶ್ರಾ ಅವರ ಬೆಂಬಲಿಗ ಅಲೋಕ್ ಸಿಂಗ್ ಅವರೂ ತಮ್ಮ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಆರೋಪಿಸಿದ್ದಾರೆ. ಆದರೆ, ಮಹಿಳೆಯ ಆರೋಪಗಳನ್ನು ಸಂಜಯ್ ಮಿಶ್ರಾ ತಳ್ಳಿಹಾಕಿದ್ದು, ಅವು ಆಧಾರರಹಿತವಾಗಿದ್ದು ತಮ್ಮ ವರ್ಚಸ್ಸಿಗೆ ಧಕ್ಕೆ ತರುವ ಪ್ರಯತ್ನ ಎಂದು ಹೇಳಿದ್ದಾರೆ. ತಪ್ಪು ಮಾಡಿರುವುದು ಸಾಬೀತಾದರೆ ಕಾನೂನು ಶಿಕ್ಷೆ ಎದುರಿಸಲು ಸಿದ್ಧ ಎಂದು ತಿಳಿಸಿದ್ದಾರೆ.*

*ಮಹಿಳೆಯ ಆರೋಪದ ಕುರಿತು ತನಿಖೆ ನಡೆಯುತ್ತಿದ್ದು, ತನಿಖೆಯಲ್ಲಿ ಲಭ್ಯವಾಗುವ ಸಾಕ್ಷ್ಯ ಹಾಗೂ ಪ್ರಕರಣದ ವಾಸ್ತವಾಂಶ ಆಧರಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಬನ್ಸ್‌ಡಿಹ್ ಉಪ ಪೊಲೀಸ್ ವರಿಷ್ಠಾಧಿಕಾರಿ ಜೈ ಶಂಕರ್ ಮಿಶ್ರಾ ತಿಳಿಸಿದ್ದಾರೆ.*



## 43.43 ಲಕ್ಷ 'ನೋ ಮ್ಯಾಪಿಂಗ್' ಮತದಾರರ ವಿಚಾರಣೆ ಚುರುಕು

**ಎಸ್‌ಐಆರ್‌ನಲ್ಲಿ 43.43 ಲಕ್ಷ 'ನೋ ಮ್ಯಾಪಿಂಗ್' ಮತದಾರರ ಪೈಕಿ 33.60 ಲಕ್ಷ ಮಂದಿಯ ವಿಚಾರಣೆ ಪೂರ್ಣ; ಅ.12ಕ್ಕೆ ಪ್ರಕ್ರಿಯೆ ಮುಕ್ತಾಯ. ಹೊಸ ಸೇರ್ಪಡೆ, ಹೆಸರು ಅಳಿಕೆ ಹಾಗೂ ತಿದ್ದುಪಡಿಗೆ ಲಕ್ಷಾಂತರ ಅರ್ಜಿ ಸಲ್ಲಿಕೆಯಾಗಿದ್ದು, ಅ.22–27ರ ನಡುವೆ ಅಂತಿಮ ಮತದಾರರ ಪಟ್ಟಿ ಪ್ರಕಟಣೆ.**

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಮುಂದುವರಿದಿದ್ದು, 'ನೋ ಮ್ಯಾಪಿಂಗ್' ಎಂದು ಗುರುತಿಸಲಾದ 43.43 ಲಕ್ಷ ಮತದಾರರ ಪೈಕಿ 33.60 ಲಕ್ಷ ಮಂದಿಯ ವಿಚಾರಣೆ ಪೂರ್ಣಗೊಂಡಿದೆ. ಈ ಮೂಲಕ ಒಟ್ಟು ಶೇ.81.99ರಷ್ಟು ವಿಚಾರಣೆ ಮುಗಿದಿದ್ದು, ಇನ್ನೂ 7.82 ಲಕ್ಷ ಮತದಾರರ ದಾಖಲೆಗಳ ಪರಿಶೀಲನೆ ಬಾಕಿಯಿದೆ. ಕೇಂದ್ರ ಚುನಾವಣಾ ಆಯೋಗದ ಸೂಚನೆಯಂತೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ–ಮನೆಗೆ ತೆರಳಿ 'ನೋ ಮ್ಯಾಪಿಂಗ್' ಮತದಾರರ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ಮತದಾರರ ವಿವರಗಳು ಹಾಗೂ ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ, ಚುನಾವಣಾ ಆಯೋಗದ ತಂತ್ರಾಂಶದಲ್ಲಿ ದಾಖಲಿಸಲಾಗುತ್ತಿದೆ. ಬಾಕಿ ಉಳಿದಿರುವ ವಿಚಾರಣೆಯನ್ನು ಅ.12ರೊಳಗೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ವಿಚಾರಣೆ ಪೂರ್ಣಗೊಂಡ ಬಳಿಕ ಮತದಾರರ ಪಟ್ಟಿಗೆ ಸಂಬಂಧಿಸಿದ ಹಕ್ಕು–ದಾವೆಗಳು ಹಾಗೂ ಆಕ್ಷೇಪಣೆಗಳನ್ನು ಸ್ವೀಕರಿಸಿ, ಅವುಗಳ ಪರಿಶೀಲನೆ ಮತ್ತು ವಿಲೇವಾರಿ ನಡೆಸಲಾಗುತ್ತದೆ. ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ಅ.22ರಿಂದ 27ರ ಅವಧಿಯಲ್ಲಿ ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ಪ್ರಕ್ರಿಯೆ ನಡೆಯಲಿದೆ.

ಹೊಸ ಸೇರ್ಪಡೆಗೆ 8.85 ಲಕ್ಷ ಅರ್ಜಿ

ಎಸ್‌ಐಆರ್ ಪ್ರಕ್ರಿಯೆಯ ಭಾಗವಾಗಿ ಹೊಸದಾಗಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು 8.85 ಲಕ್ಷ ಮಂದಿ ಫಾರ್ಮ್–6 ಮೂಲಕ ಅರ್ಜಿ ಸಲ್ಲಿಸಿದ್ದಾರೆ. ವಿದೇಶದಲ್ಲಿ ನೆಲೆಸಿರುವ 4,648 ಮಂದಿ ಫಾರ್ಮ್–6ಎ ಮೂಲಕ ಮತದಾರರ ಪಟ್ಟಿಗೆ ನೋಂದಣಿಗೆ ಅರ್ಜಿ ಸಲ್ಲಿಸಿದ್ದಾರೆ. ಇದೇ ವೇಳೆ, ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕುವಂತೆ 84,900 ಮಂದಿ ಫಾರ್ಮ್–7 ಮೂಲಕ ಅರ್ಜಿ ಸಲ್ಲಿಸಿದ್ದಾರೆ. ಹೆಸರು ಅಥವಾ ಮತದಾರರ ವಿವರಗಳಲ್ಲಿ ತಿದ್ದುಪಡಿ ಕೋರಿ 11.78 ಲಕ್ಷ ಮಂದಿ ಅರ್ಜಿ ಸಲ್ಲಿಸಿದ್ದಾರೆ.

ಈ ಎಲ್ಲ ಅರ್ಜಿಗಳು, ಹಕ್ಕು–ದಾವೆಗಳು, ಆಕ್ಷೇಪಣೆಗಳು ಹಾಗೂ ಸಂಬಂಧಿತ ದಾಖಲೆಗಳ ಪರಿಶೀಲನೆ ಪೂರ್ಣಗೊಂಡ ಬಳಿಕ ಅರ್ಹತೆಯ ಆಧಾರದ ಮೇಲೆ ಮತದಾರರ ಪಟ್ಟಿಯಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡಲಾಗುತ್ತದೆ. ಬಳಿಕ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —
ವಿಕ್ರಮ ವಾಹಿನಿ

### ಸವಿ ವಾಹಿನಿ

ಶ್ರೇಷ್ಠತೆಯ ಬೀಜವು ನಿಮ್ಮೊಳಗೆ ಇದೆ, ಆದರೆ ಅಸಾಧಾರಣತೆಯ ಹೂವು ಇತರರನ್ನು ರಕ್ಷಿಸುವ ಮಣ್ಣಿನಿಂದ ಬೆಳೆಯುತ್ತದೆ.

### ದಿನ ಪಂಚಾಂಗ

ಅಕ್ಟೋಬರ್, 04-2026, ಭಾನುವಾರ ವರ್ಷ ಋತು, ಭಾದ್ರಪದ ಮಾಸ, ಬಹುಳ ಪಕ್ಷ
ಅಷ್ಟಮಿ ತಿಥಿ ಬೆ.7:36, ನವಮಿ ತಿಥಿ ಮಾ.ಬೆ.5:06
ಪುನರ್ವಸು ನಕ್ಷತ್ರ ರಾ.2:28
ರಾಹುಕಾಲ ಸಾ 4:37-6:07
ಮಧ್ಯಾಷ್ಟಮಿ, ಹರಿಹರ ವ್ರತ, ಅವಿಧವಾನವಮಿ, ವಿಶ್ವ ಪ್ರಾಣಿ ಕಲ್ಯಾಣ ದಿನ, ಮಲ್ಲೇಶ್ವರಂ ಸಿದ್ಧಿಪ್ರದ ಗಣಪತಿ ಮಹಾಭಿಷೇಕ, ಕೂಡ್ಲಿ ಸಚ್ಚಿದಾನಂದ ವಾಲುಕೇಶ್ವರ ವರ್ಧಂತಿ, ಶೃಂಗೇರಿ ಅಭಿನವ ವಿದ್ಯಾತೀರ್ಥ ಆರಾಧನೆ, ಲಚ್ಯಾಣ ಪುಣ್ಯತಿಥಿ, ಚಿಕ್ಕೋಡಿ । ಡೋಣಿವಾಡಿ ಸಪ್ತಾಹ, ಕೂಡ್ಲಿ ಸಚ್ಚಿದಾನಂದ ವಾಲುಕೇಶ್ವರಭಾರತೀ ವರ್ಧಂತಿ, ದಾಸರಹಟ್ಟಿ ನಿರ್ವಾಣೇಶ್ವರ ಜಾತ್ರೆ

# ದಸರಾಕ್ಕೆ ಏರೋ ಶೋ, ಹೊರರಾಜ್ಯಗಳ ಕಲಾ ತಂಡ

**ದಸರಾಕ್ಕೆ ಏರೋ ಶೋ, ಹೊರರಾಜ್ಯಗಳ ಕಲಾ ತಂಡಗಳ ಪ್ರದರ್ಶನಕ್ಕೆ ಸಿದ್ಧತೆ; ಎಸ್‌ಐಆರ್‌ನಲ್ಲಿ ಅರ್ಹ ಮತದಾರರ ಹೆಸರು ಕೈತಪ್ಪದಂತೆ ಸಮಗ್ರ ಪರಿಶೀಲನೆ. 217 ತಾಲ್ಲೂಕುಗಳ ಬರ ಪರಿಸ್ಥಿತಿ ಕುರಿತು ಕೇಂದ್ರ ತಂಡದ ಪರಿಶೀಲನೆ ಬಳಿಕ ಪರಿಹಾರದ ಮುಂದಿನ ಕ್ರಮ: ಸಿಎಂ ಡಿಕೆಶಿ.**

● ವಿಕ್ರಮ ವಾಹಿನಿ । ಪಿರಿಯಾಪಟ್ಟಣ

ನಾಡಹಬ್ಬ ಮೈಸೂರು ದಸರಾಕ್ಕೆ ಪ್ರತಿವರ್ಷ ಹೊಸತನದ ಸ್ಪರ್ಶ ನೀಡುವ ಉದ್ದೇಶದಿಂದ ಏರೋ ಶೋ, ಹೊರರಾಜ್ಯಗಳ ಕಲಾ ತಂಡಗಳ ಪ್ರದರ್ಶನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು. ಪಿರಿಯಾಪಟ್ಟಣದ ಹೆಲಿಪ್ಯಾಡ್ ಬಳಿ ಶನಿವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದಸರಾಕ್ಕೆ ಪಕ್ಕದ ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಕೇಂದ್ರದ ನಾಯಕರಿಗೂ ಆಹ್ವಾನ ನೀಡಲಾಗುವುದು ಎಂದರು.

ರಕ್ಷಣಾ ಸಚಿವರನ್ನು ಭೇಟಿ ಮಾಡಿ ದಸರಾ ಸಂದರ್ಭದಲ್ಲಿ ಏರೋ ಶೋ ನಡೆಸಲು ಮನವಿ ಮಾಡಿದ್ದು, ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಯುವಕರು ಹಾಗೂ ವಿದ್ಯಾರ್ಥಿಗಳಿಗೆ ರಕ್ಷಣಾ ಪಡೆಗಳ ಶಿಸ್ತು ಮತ್ತು ಸಾಮರ್ಥ್ಯ ಪರಿಚಯಿಸುವ ಉದ್ದೇಶವೂ ಇದರಲ್ಲಿದೆ ಎಂದು ಹೇಳಿದರು.

ಬೈಲಕುಪ್ಪೆಯ ಸಾಂಸ್ಕೃತಿಕ ಪರಂಪರೆಗೆ ದಸರಾ ವೇದಿಕೆಯಲ್ಲಿ ಅವಕಾಶ ಕಲ್ಪಿಸಲಾಗುವುದು. ಸ್ಯಾಂಡಲ್‌ವುಡ್‌ನ ಹಿರಿಯ ಹಾಗೂ ಯುವ ಕಲಾವಿದರನ್ನು ಆಹ್ವಾನಿಸಲಾಗುತ್ತಿದ್ದು, ತಮಿಳುನಾಡು, ಕೇರಳ ಸೇರಿದಂತೆ ನೆರೆಯ ರಾಜ್ಯಗಳ ಕಲಾ ತಂಡಗಳಿಗೂ ಪ್ರದರ್ಶನಕ್ಕೆ ಅವಕಾಶ ನೀಡಲಾಗುವುದು. ಪ್ರತಿವರ್ಷ ದಸರಾ ಆಚರಣೆಯಲ್ಲಿ ಹೊಸತನ ಇರಬೇಕು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

**ಎಸ್‌ಐಆರ್‌ನಲ್ಲಿ ಸಮಗ್ರ ಪರಿಶೀಲನೆ:** ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಗೊಂದಲಗಳಿರುವುದು ಗಮನಕ್ಕೆ ಬಂದಿದೆ ಎಂದು ಹೇಳಿದ ಶಿವಕುಮಾರ್, ಫಾರಂ-7 ಅರ್ಜಿಗಳನ್ನು ಸಮಗ್ರವಾಗಿ ಪರಿಶೀಲಿಸಿ, ಅರ್ಹ ಮತದಾರರ ಹೆಸರು ಯಾವುದೇ ಕಾರಣಕ್ಕೂ ಕೈತಪ್ಪದಂತೆ ನೋಡಿಕೊಳ್ಳಲು ಚುನಾವಣಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಹಳೆಯ ಮತದಾರರ ಪಟ್ಟಿಯನ್ನೂ ಪರಿಶೀಲಿಸಿ ಲೋಪಗಳನ್ನು ಸರಿಪಡಿಸಬೇಕು. ಅರ್ಹ ಹೊಸ ಮತದಾರರನ್ನು ಪಟ್ಟಿಗೆ ಸೇರಿಸುವ ಜೊತೆಗೆ, ಅಲ್ಪಸಂಖ್ಯಾತರು, ದಲಿತರು, ಪರಿಶಿಷ್ಟ ಜಾತಿ-ಪಂಗಡಗಳು ಹಾಗೂ ಬಡವರು ಸೇರಿದಂತೆ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕು ಎಂದು ಮನವಿ ಮಾಡಿದರು. ತಪ್ಪು ಅರ್ಜಿಗಳ ಕುರಿತು ಕಾನೂನುಬದ್ಧವಾಗಿ ಕ್ರಮ ಕೈಗೊಳ್ಳಬೇಕು ಎಂದರು.

ತಮ್ಮ ವಿರುದ್ಧ ಪ್ರಕರಣ ದಾಖಲಿಸಬೇಕು ಎಂಬ ಪ್ರತಿಪಕ್ಷಗಳ ಆಗ್ರಹಕ್ಕೆ ಪ್ರತಿಕ್ರಿಯಿಸಿದ ಅವರು, ತಾವು ಚುನಾವಣಾ ಆಯೋಗದ ಮುಂದೆ ಸಂವಿಧಾನಾತ್ಮಕ ಸಂಸ್ಥೆಯ ಪ್ರತಿನಿಧಿಯಾಗಿ ಮನವಿ ಸಲ್ಲಿಸಿದ್ದೇನೆ. ತಾನು ತಪ್ಪು ಮಾಡಿದ್ದರೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಿ; ಕಾನೂನಿಗೆ ಎಲ್ಲರೂ ಗೌರವ ನೀಡಬೇಕು ಎಂದರು.

**ಬರ ಪರಿಹಾರಕ್ಕೆ ಆತುರ ಬೇಡ:** ರಾಜ್ಯದ ಬರ ಪರಿಸ್ಥಿತಿ ಪರಿಶೀಲಿಸಲು ಕೇಂದ್ರ ತಂಡ ಆಗಮಿಸಿರುವ ಹಿನ್ನೆಲೆಯಲ್ಲಿ, 217 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿರುವ ಮಾಹಿತಿ ಹಾಗೂ ಕಳೆದ ಹಲವು ದಶಕಗಳ ಮಳೆ-ಬರದ ದಾಖಲೆಗಳನ್ನು ತಂಡದ ಮುಂದಿಡಲಾಗಿದೆ. ಹೆಚ್ಚಿನ ಪ್ರದೇಶಗಳ ಪರಿಶೀಲನೆ ನಡೆಸುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಕೇಂದ್ರ ತಂಡದ ವಾಸ್ತವ ಪರಿಶೀಲನೆ ಪೂರ್ಣಗೊಳ್ಳುವವರೆಗೆ ಆತುರದ ನಿರ್ಧಾರ ಕೈಗೊಳ್ಳುವುದಿಲ್ಲ. ಮೊದಲು ಕೇಂದ್ರ ತಂಡವನ್ನು ವಿಶ್ವಾಸಕ್ಕೆ ತೆಗೆದುಕೊಂಡು ರಾಜ್ಯದ ಪರಿಸ್ಥಿತಿಯನ್ನು ಮನವರಿಕೆ ಮಾಡಲಾಗುವುದು. ಬಳಿಕ ಮುಂದಿನ ಕ್ರಮದ ಬಗ್ಗೆ ನಿರ್ಧರಿಸಲಾಗುವುದು ಎಂದರು.

ನೈಸ್ ಯೋಜನೆ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ಆರೋಪಗಳ ಕುರಿತು ಕೇಳಿದ ಪ್ರಶ್ನೆಗೆ, ರಾಜ್ಯದಲ್ಲಿ ಕಾನೂನು ಇದೆ. ಕಾನೂನು ಎಲ್ಲರಿಗೂ ಉತ್ತರ ನೀಡಲಿದೆ ಎಂದು ಶಿವಕುಮಾರ್ ಪ್ರತಿಕ್ರಿಯಿಸಿದರು.

## ಪತ್ನಿ ಸ್ನಾತಕೋತ್ತರ ಪದವಿ ಪಡೆದಿದ್ದರೂ ಜೀವನಾಂಶ ನಿರಾಕರಣೆ ಸಲ್ಲದು: ಹೈಕೋರ್ಟ್



● ವಿಕ್ರಮ ವಾಹಿನಿ । ಬೆಂಗಳೂರು

ಪತ್ನಿ ಸ್ನಾತಕೋತ್ತರ ಪದವಿ ಪಡೆದಿದ್ದಾಳೆ ಎಂಬ ಕಾರಣಕ್ಕೆ ಮಾತ್ರ ಆಕೆಗೆ ಸಿಆರ್‌ಪಿಸಿ ಸೆಕ್ಷನ್ 125 ಅಡಿಯಲ್ಲಿ ಜೀವನಾಂಶ ನಿರಾಕರಿಸಲಾಗದು ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ವಿಚ್ಛೆದನ ಪ್ರಕರಣದಲ್ಲಿ ಶಾಶ್ವತ ಜೀವನಾಂಶದ ಬೇಡಿಕೆ ತಿರಸ್ಕೃತವಾಗಿದ್ದರೂ, ಅದನ್ನು ಆಧಾರವಾಗಿ ಬಳಸಿ ಮಾಸಿಕ ಜೀವನಾಂಶ ನಿರಾಕರಿಸಲು ಸಾಧ್ಯವಿಲ್ಲಎಂದು ನ್ಯಾಯಮೂರ್ತಿ ಡಾ. ಚಿಲ್ಲಕುರ್ ಸುಮಲತಾ ಅವರ ಏಕಸದಸ್ಯ ಪೀಠ ಆದೇಶಿಸಿದೆ.

ವಾದ-ಪ್ರತಿವಾದ ಆಲಿಸಿದ ಪೀಠವು 'ವಿಚ್ಛೇದನ ಪ್ರಕರಣದಲ್ಲಿ ಶಾಶ್ವತ ಜೀವನಾಂಶ ತಿರಸ್ಕೃತವಾಗಿದ್ದು, ಪತಿಯ ಆರ್ಥಿಕ ಸಾಮರ್ಥ್ಯವನ್ನು ಪತ್ನಿ ಸಾಬೀತುಪಡಿಸಲು ವಿಫಲವಾದ ಕಾರಣಕ್ಕೆ ಮಾತ್ರ. ಇದರಿಂದ ಸಿಆರ್‌ಪಿಸಿ ಸೆಕ್ಷನ್ 125 ರಡಿ ಜೀವನಾಂಶ ಪಡೆಯುವ ಹಕ್ಕು ಕಳೆದುಹೋಗುವುದಿಲ್ಲ" ಎಂದು ಹೇಳಿದೆ.

ಪತಿಯು ಖಾಸಗಿ ಸಂಸ್ಥೆಯಲ್ಲಿ ಸಹಾಯಕ ಲೆಕ್ಕಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದು, ತಿಂಗಳಿಗೆ ಸುಮಾರು ರೂ 29,000 ಆದಾಯ ಗಳಿಸುತ್ತಿರುವುದನ್ನು ಪರಿಗಣಿಸಿದ ಹೈಕೋರ್ಟ್, ಪತ್ನಿ ಮತ್ತು ಮಗನಿಗೆ ತಲಾ ತಿಂಗಳಿಗೆ ರೂ 5,000 ನಿರ್ವಹಣಾ ಭತ್ಯೆ ಪಾವತಿಸುವಂತೆ ಆದೇಶಿಸಿದೆ.

ಪ್ರಕರಣದಲ್ಲಿ ಪತ್ನಿಯ ಪರಿಷ್ಕರಣಾ ಅರ್ಜಿಯನ್ನು ಅಂಗೀಕರಿಸಿದ ನ್ಯಾಯಾಲಯವು ಕೌಟುಂಬಿಕ ನ್ಯಾಯಾಲಯದ ಆದೇಶವನ್ನು ಸ್ವಲ್ಪ ಮಾರ್ಪಾಟು ಮಾಡಿದೆ.

ಪತ್ನಿ ಕಲಾ ವಿಭಾಗದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾಳೆ ಎಂಬುದಷ್ಟೆ ಆಕೆಗೆ ನಿರ್ವಹಣಾ ಭತ್ಯೆ ನಿರಾಕರಿಸಲು ಸಾಕಷ್ಟು ಕಾರಣವಲ್ಲ. ಆಕೆ ಉದ್ಯೋಗದಲ್ಲಿದ್ದಾಳೆ ಅಥವಾ ಸ್ವತಂತ್ರವಾಗಿ ಆದಾಯ ಗಳಿಸುತ್ತಿದ್ದಾಳೆ ಎಂಬುದನ್ನು ಪತಿ ಕೂಡ ಹೇಳಿಲ್ಲ ಎಂದು ಹೈಕೋರ್ಟ್ ಉಲ್ಲೇಖಿಸಿದೆ.

ಪ್ರಕರಣದ ಹಿನ್ನೆಲೆ: ಪತ್ನಿ ಹಾಗೂ ಅಪ್ರಾಪ್ತ ಮಗ ಸಿಆರ್‌ಪಿಸಿ ಸೆಕ್ಷನ್ 125 ರಡಿಯಲ್ಲಿ ಕ್ರಮವಾಗಿ ತಿಂಗಳಿಗೆ ರೂ 20,000 ಮತ್ತು ರೂ 10, 000 ನಿರ್ವಹಣಾ ಭತ್ಯೆ ಕೋರಿ ಅರ್ಜಿ ಸಲ್ಲಿಸಿದ್ದರು. ಕೌಟುಂಬಿಕ ನ್ಯಾಯಾಲಯವು ಮಗನಿಗೆ ತಿಂಗಳಿಗೆ ರೂ 5 ಸಾವಿರ ಮಂಜೂರು ಮಾಡಿತ್ತು,

ಆದರೆ ಪತ್ನಿಯ ಹಿಂದಿನ ರೂ 10 ಲಕ್ಷ ಶಾಶ್ವತ ಜೀವನಾಂಶದ ಬೇಡಿಕೆ ತಿರಸ್ಕೃತವಾಗಿತ್ತು ಎಂಬ ಕಾರಣ ನೀಡಿ ಆಕೆಯ ಅರ್ಜಿಯನ್ನು ತಿರಸ್ಕರಿಸಿತ್ತು. ಜೊತೆಗೆ, ಪತ್ನಿ ಎಂ ಎ ಪದವಿ ಹೊಂದಿರುವುದರಿಂದ ಉದ್ಯೋಗ ಪಡೆದು ಜೀವನ ನಡೆಸಬಹುದು ಎಂದು ಕೌಟುಂಬಿಕ ನ್ಯಾಯಾಲಯ ಅಭಿಪ್ರಾಯಪಟ್ಟಿತ್ತು. ಆ ಆದೇಶವನ್ನು ಪ್ರಶ್ನಿಸಿ ಪತ್ನಿ ಸಲ್ಲಿಸಿದ್ದ ಪರಿಷ್ಕರಣಾ ಅರ್ಜಿಯನ್ನು ಹೈಕೋರ್ಟ್ ಇದೀಗ ಭಾಗಶಃ ಮಾನ್ಯ ಮಾಡಿದೆ.

## ರೈತರ ಕಣ್ಣೀರ ಶಾಪ ಸರ್ಕಾರಕ್ಕೆ ತಟ್ಟಲಿದೆ: ನಿಖಿಲ್

● ವಿಕ್ರಮ ವಾಹಿನಿ । ಹಿರಿಯೂರು



ರಾಜ್ಯದಲ್ಲಿ ಬರದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದರೂ ಸರ್ಕಾರ ಅವರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದರು. ರೈತರ ಕಣ್ಣೀರಿಗೆ ಸರ್ಕಾರ ಬೆಲೆ ತೆರಬೇಕಾಗುತ್ತದೆ. ರೈತರನ್ನು ಎದುರು ಹಾಕಿಕೊಂಡ ಯಾವ ಸರ್ಕಾರವೂ ಉಳಿದಿಲ್ಲ ಎಂದು ಅವರು ಎಚ್ಚರಿಸಿದರು.

ಹಿರಿಯೂರಿನಲ್ಲಿ ಶನಿವಾರ ನಡೆದ ರೈತ ಸ್ವಾಭಿಮಾನ ಯಾತ್ರೆಯ ಬಹಿರಂಗ ಸಭೆಯಲ್ಲಿ ಮಾತನಾಡಿದ ಅವರು, ಇದು ರಾಜಕೀಯ ಲಾಭ-ನಷ್ಟದ ಹೋರಾಟವಲ್ಲ. ರೈತರ ಬದುಕು ಮತ್ತು ಸ್ವಾಭಿಮಾನದ ಪ್ರಶ್ನೆಯಾಗಿದೆ ಎಂದರು.

ಭದ್ರಾ ಮೇಲ್ದಂಡೆ ಯೋಜನೆಗೆ ಅಡಿಪಾಯ ಹಾಕಿದ್ದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ.

ವಾಣಿ ವಿಲಾಸ ಸಾಗರದಲ್ಲಿ 30 ಟಿಎಂಸಿ ನೀರು ಸಂಗ್ರಹಿಸಿ ಮಧ್ಯ ಕರ್ನಾಟಕದ ಬರಡು ಭೂಮಿಯನ್ನು ಹಸಿರಾಗಿಸುವುದು ಅವರ ಕನಸಾಗಿತ್ತು. ಆದರೆ ಶಾಂತಿಪುರದಿಂದ ಗೋನೂರುವರೆಗೆ ಟ್ರಯಲ್ ರನ್ ನಡೆಸಿ ಪ್ರಚಾರ ಪಡೆಯಲಾಗುತ್ತಿದೆ. ಇದು ಚುನಾವಣಾ ಗಿಮಿಕ್ ಆಗಬಾರದು ಎಂದು ಟೀಕಿಸಿದರು.

ಹಿರಿಯೂರು ತಾಲ್ಲೂಕಿನ 57 ಕೆರೆಗಳನ್ನು ಭದ್ರಾ ಮೇಲ್ದಂಡೆ ಯೋಜನೆಯಡಿ ತುಂಬಿಸಬೇಕು. 164 ಕಿ.ಮೀ. ದೂರಕ್ಕೆ ನೀರು ಹರಿಸಿ ಫೋಟೊ ತೆಗೆಸಿಕೊಳ್ಳುವುದರಿಂದ ಪ್ರಯೋಜನವಿಲ್ಲ. ಕಟ್ಟಕಡೆಯ ಕೆರೆಗೂ ನೀರು ತಲುಪಬೇಕು. ವಾಣಿ ವಿಲಾಸ ಸಾಗರಕ್ಕೆ 23 ಟಿಎಂಸಿ ನೀರು ಹರಿಸುವ ಮೂಲಕ ರೈತರ ಬಹುದಿನಗಳ ಬೇಡಿಕೆಯನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

**ರೂ 2,500 ಬರ ಪರಿಹಾರಕ್ಕೆ ಆಕ್ಷೇಪ**

ರೈತರಿಗೆ ಎಕರೆಗೆ ರೂ 2,500 ಬರ ಪರಿಹಾರ ನೀಡುತ್ತಿರುವುದನ್ನು ಪ್ರಶ್ನಿಸಿದ ನಿಖಿಲ್, ಈ ಮೊತ್ತದಿಂದ ರೈತರ ಬದುಕು ಸುಧಾರಿಸಲು ಸಾಧ್ಯವೇ? ರೈತ ಭಿಕ್ಷುಕನಲ್ಲ; ಆತನಿಗೆ ಸ್ವಾಭಿಮಾನವಿದೆ. ರೈತರ ಸ್ವಾಭಿಮಾನವನ್ನು ಕೆಣಕಬಾರದು ಎಂದರು.

ರಾಜ್ಯದಲ್ಲಿ 3,500ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದ ಅವರು, ರೈತರ ಸಂಕಷ್ಟಕ್ಕೆ ಸರ್ಕಾರವೇ ಹೊಣೆ ಎಂದು ದೂರಿದರು. ಮುಂಬರುವ ಉಪಚುನಾವಣೆ 2028ರ ವಿಧಾನಸಭಾ ಚುನಾವಣೆಗೆ ದಿಕ್ಸೂಚಿಯಾಗಬೇಕು ಎಂದು ಕರೆ ನೀಡಿದರು.

ಇದಕ್ಕೂ ಮುನ್ನ ನಿಖಿಲ್ ಅವರು ಕೆ.ಆರ್. ಹಳ್ಳಿಯ ರೈತ ರಾಜಣ್ಣ ಅವರ ತೆಂಗಿನ ತೋಟಕ್ಕೆ ಭೇಟಿ ನೀಡಿ ಬೆಳೆಹಾನಿ ಪರಿಶೀಲಿಸಿದರು. ಬಳಿಕ ಪಿಟ್ಲಾಲಿ ಗ್ರಾಮದಲ್ಲಿ ಜನರನ್ನು ಭೇಟಿ ಮಾಡಿ, ಗಾಂಧಿ ವೃತ್ತದಿಂದ ನೆಹರು ಮಾರುಕಟ್ಟೆ ಮಾರ್ಗವಾಗಿ ತಾಲ್ಲೂಕು ಕಚೇರಿವರೆಗೆ ರೈತರೊಂದಿಗೆ ಪಾದಯಾತ್ರೆ ನಡೆಸಿದರು. ನೂರಾರು ರೈತರು ಹಾಗೂ ಜೆಡಿಎಸ್ ಕಾರ್ಯಕರ್ತರು ಪಾಲ್ಗೊಂಡಿದ್ದರು.

## ಇ-ಕೆವೈಸಿಗೆ ರೂ 500 ಪಡೆದ ನ್ಯಾಯಬೆಲೆ ಅಂಗಡಿ ಪರವಾನಗಿ ಅಮಾನತು

● ವಿಕ್ರಮ ವಾಹಿನಿ । ಬೆಂಗಳೂರು

ಪಡಿತರ ಚೀಟಿದಾರರಿಂದ ಇ-ಕೆವೈಸಿ ಮಾಡಿಸಲು 500 ಪಡೆದ ಆರೋಪ ಹಾಗೂ ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ವಲಯದ ಚಂದ್ರಪ್ಪನಗರ ಆರ್‌ಸಿಎಚ್‌ಎಸ್‌ನ ನ್ಯಾಯಬೆಲೆ ಅಂಗಡಿ ಪರವಾನಗಿಯನ್ನು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಮಾನತುಗೊಳಿಸಿದೆ.

ಅ.2ರಂದು ನ್ಯಾಯಬೆಲೆ ಅಂಗಡಿಯ ಕಾರ್ಯದರ್ಶಿ ಬಸವರಾಜಸ್ವಾಮಿ ಎಂಬುವವರ ಇ-ಕೆವೈಸಿ ಮಾಡಿಸಲು ಫೋನ್‌ಪೇ ಮೂಲಕ 500 ಪಡೆದಿದ್ದಾರೆ ಎಂಬ ದೂರು ಬಂದಿತ್ತು. ಅಧಿಕಾರಿಗಳು ಅಂಗಡಿಗೆ ಭೇಟಿ ನೀಡಿ ಪರಿಶೀಲಿಸಿದಾಗ ಆರೋಪ ದೃಢಪಟ್ಟಿದೆ ಎಂದು ಇಲಾಖೆ ತಿಳಿಸಿದೆ.

ಪರಿಶೀಲನೆ ವೇಳೆ ದರಪಟ್ಟಿ, ದಾಸ್ತಾನು ಫಲಕ, ಆಹಾರ ಧಾನ್ಯಗಳ ಮಾದರಿ ಹಾಗೂ ತನಿಖಾ ಪುಸ್ತಕ ಇರದಿರುವುದು ಕಂಡುಬಂದಿದೆ. ಅಂಗಡಿಯಲ್ಲಿ ಸ್ವಚ್ಛತೆ ಕಾಪಾಡದಿರುವುದು, ಸುಮಾರು 3.75 ಕ್ವಿಂಟಾಲ್ ರಾಗಿಯನ್ನು ಸಮರ್ಪಕವಾಗಿ ಸಂಗ್ರಹಿಸದಿರುವುದು ಸೇರಿದಂತೆ ಹಲವು ನಿಯಮ ಉಲ್ಲಂಘನೆಗಳು ಪತ್ತೆಯಾಗಿವೆ.

ಈ ಕುರಿತು ಕಾರಣ ಕೇಳಿ ನೋಟಿಸ್ ನೀಡಿದ್ದರೂ ಸಮರ್ಪಕ ಲಿಖಿತ ಸಮಜಾಯಿಷಿ ಸಲ್ಲಿಸದ ಹಿನ್ನೆಲೆಯಲ್ಲಿ, ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ-2016ರಡಿ ವಿಚಾರಣೆ ಕಾಯ್ದಿರಿಸಿ, ಪರವಾನಗಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಲಾಗಿದೆ.

# 'ಬರದ ನೈಜ ಚಿತ್ರಣ ಕೇಂದ್ರ ತಂಡಕ್ಕೆ ಮನವರಿಕೆ'

## ರೂ 46 ಸಾವಿರ ಕೋಟಿ ನಷ್ಟ; ರೂ 7,500 ಕೋಟಿ ಪರಿಹಾರಕ್ಕೆ ಮನವಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಮಳೆ ಕೊರತೆ, ಬೆಳೆ ನಷ್ಟ, ಕುಡಿಯುವ ನೀರು, ಮೇವು, ಜಲಾಶಯಗಳ ನೀರಿನ ಲಭ್ಯತೆ, ಬೆಳೆ ವಿಮೆ ಹಾಗೂ ರೈತರಿಗೆ ನೀಡುತ್ತಿರುವ ನೆರವಿನ ಕುರಿತು ಕೇಂದ್ರದ ಬರ ಅಧ್ಯಯನ ತಂಡಕ್ಕೆ ಸಮಗ್ರ ಮಾಹಿತಿ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ತಿಳಿಸಿದರು.

ಕೇಂದ್ರದ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹೂ ನೇತೃತ್ವದ ತಂಡದೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಅಧಿಕಾರಿಗಳನ್ನು ಮೂರು ತಂಡಗಳಾಗಿ ವಿಂಗಡಿಸಿ ಉತ್ತರ, ಮಧ್ಯ ಹಾಗೂ ದಕ್ಷಿಣ ಕರ್ನಾಟಕದ ವಿವಿಧ ಭಾಗಗಳಲ್ಲಿ ನಾಲ್ಕು ದಿನಗಳ ಕಾಲ ಸ್ಥಳ ಪರಿಶೀಲನೆ ನಡೆಸಲಿದ್ದಾರೆ ಎಂದರು.



ಮೊದಲ ಹಂತದಲ್ಲಿ ರೂ 18 ಸಾವಿರ ಕೋಟಿ ಹಾಗೂ ಎರಡನೇ ಹಂತದಲ್ಲಿ 77 ತಾಲೂಕುಗಳಲ್ಲಿ ರೂ 27 ಸಾವಿರ ಕೋಟಿ ಸೇರಿದಂತೆ ಒಟ್ಟು ರೂ 46 ಸಾವಿರ ಕೋಟಿ ನಷ್ಟವಾಗಿದೆ. ಕೇಂದ್ರದ ಮಾರ್ಗಸೂಚಿಯಂತೆ ಎರಡು ಹಂತಗಳಲ್ಲಿ ಒಟ್ಟು ರೂ 7,500 ಕೋಟಿ ಪರಿಹಾರಕ್ಕೆ ರಾಜ್ಯ ಮನವಿ ಸಲ್ಲಿಸಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಕೇಂದ್ರದ ಬರ ನಿರ್ವಹಣಾ ಕೈಪಿಡಿಯ ಮಾನದಂಡಗಳನ್ನು ಪಾಲಿಸಿಯೇ ನಷ್ಟದ ಅಂದಾಜು ಮಾಡಿದೆ. ಹೀಗಾಗಿ ಕೇಂದ್ರ ತಂಡ ಸ್ಥಳಕ್ಕೆ ತೆರಳಿ ನೈಜ ಪರಿಸ್ಥಿತಿಯನ್ನು ಪರಿಶೀಲಿಸಿ ನ್ಯಾಯಯುತವಾಗಿ ಪರಿಹಾರ ನಿಗದಿಪಡಿಸಬೇಕು ಎಂದು ಮನವಿ ಮಾಡಲಾಗಿದೆ ಎಂದರು.

ರಾಜ್ಯದಲ್ಲಿ ಸುಮಾರು 39 ಲಕ್ಷ ರೈತರು ಬೆಳೆ ವಿಮೆಗೆ ನೋಂದಣಿಯಾಗಿದ್ದು, ಇನ್‌ಪುಟ್ ಸಬ್ಸಿಡಿ, ಮೇವು, ಕುಡಿಯುವ ನೀರು ಹಾಗೂ ಗುಳೆ ತಡೆಯಲು ಕೈಗೊಂಡಿರುವ ಕ್ರಮಗಳ ಬಗ್ಗೆಯೂ ತಂಡಕ್ಕೆ ಮಾಹಿತಿ ನೀಡಲಾಗಿದೆ. ಬರದ ಹಿನ್ನೆಲೆಯಲ್ಲಿ ಸುಮಾರು 1.27 ಲಕ್ಷ ಮಾನವ ದಿನಗಳ ಉದ್ಯೋಗ ಸೃಷ್ಟಿಸುವ ಕೆಲಸಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಇತ್ತೀಚಿನ ಎರಡು-ಮೂರು ದಿನಗಳ ಮಳೆಯಿಂದ ಈಗಾಗಲೇ ಸಂಭವಿಸಿರುವ ಬೆಳೆ ನಷ್ಟದ ಮೇಲೆ ಹೆಚ್ಚಿನ ಪರಿಣಾಮವಿಲ್ಲ. ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ಉಂಟಾದ ಮಳೆ ಕೊರತೆಯೇ ಬರದ ಮೌಲ್ಯಮಾಪನಕ್ಕೆ ಪ್ರಮುಖವಾಗಲಿದೆ ಎಂದರು.

ರಾಜ್ಯದಲ್ಲಿ 217 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಉಳಿದ 23 ತಾಲೂಕುಗಳಲ್ಲೂ ಗ್ರೌಂಡ್ ಟ್ರೂಥಿಂಗ್ ನಡೆಸಲಾಗುವುದು. ಕೇಂದ್ರದ ಮಾರ್ಗಸೂಚಿಗಳ ಪ್ರಕಾರ ರಾಜ್ಯಕ್ಕೆ ಸಿಗಬೇಕಾದ ಪರಿಹಾರವನ್ನು ನ್ಯಾಯಯುತವಾಗಿ ನೀಡಬೇಕು ಎಂಬುದೇ ನಮ್ಮ ಮನವಿ ಎಂದು ಪರಮೇಶ್ವರ ಹೇಳಿದರು.

## ಶೋಭಾ ಅಪಾರ್ಟ್‌ಮೆಂಟ್ ಮೂಲಕ 2 ಸಾವಿರ ಕೋಟಿ ಆಸ್ತಿ: ಕುಮಾರಸ್ವಾಮಿ

● ವಿಕ್ರಮ ವಾಹಿನಿ । ಬೆಂಗಳೂರು

ನೈಸ್ ಯೋಜನೆಗೆ ಸಂಬಂಧಿಸಿದ ಭೂ ವ್ಯವಹಾರಗಳ ವಿಚಾರವಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಶನಿವಾರವೂ ವಾಗ್ದಾಳಿ ಮುಂದುವರಿಸಿದರು. ಹೊಸಕೆರೆಹಳ್ಳಿ ಟೋಲ್ ಬಳಿ ಇರುವ ಶೋಭಾ ಅಪಾರ್ಟ್‌ಮೆಂಟ್ ಹಾಗೂ ನೈಸ್ ರಸ್ತೆ ಸುತ್ತಮುತ್ತ ನಡೆದಿರುವ ಭೂ ವ್ಯವಹಾರಗಳ ಕುರಿತು ಹಲವು ಪ್ರಶ್ನೆಗಳನ್ನು ಎತ್ತಿದ ಅವರು, ಈ ಕುರಿತು ಸರ್ಕಾರ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ನೈಸ್ ರಸ್ತೆಗಾಗಿ ಭೂಮಿ ಕಳೆದುಕೊಂಡ ಸಂತ್ರಸ್ತರನ್ನು ಭೇಟಿ ಮಾಡಿದ ಬಳಿಕ ಮಾತನಾಡಿದ ಕುಮಾರಸ್ವಾಮಿ, ಹೊಸಕೆರೆಹಳ್ಳಿ ಶೋಭಾ ಅಪಾರ್ಟ್‌ಮೆಂಟ್‌ಗೆ ಮುಖ್ಯಮಂತ್ರಿ ಹಾಗೂ ಅವರ ಕುಟುಂಬದವರಿಗಿರುವ ಸಂಬಂಧವೇನು? ಸರ್ಕಾರಿ ಯೋಜನೆಗೆ ಅಧಿಸೂಚಿತವಾಗಿದ್ದ ಭೂಮಿ ನಂತರ ಹೇಗೆ ಖರೀದಿಯಾಯಿತು? ನಿರಾಪೇಕ್ಷಣಾ ಪತ್ರ ಹೇಗೆ ದೊರೆಯಿತು? ಎಂದು ಪ್ರಶ್ನಿಸಿದರು.



ಅಪಾರ್ಟ್‌ಮೆಂಟ್ ಯೋಜನೆಯಿಂದ ಸುಮಾರು 2,000 ಕೋಟಿ ಮೌಲ್ಯದ ಆಸ್ತಿ ಸೃಷ್ಟಿಯಾಗಿದೆ ಎಂದು ಅವರು ಆರೋಪಿಸಿದರು.

ಈ ಆರೋಪಗಳ ಕುರಿತು ಶಿವಕುಮಾರ್ ಈಗಾಗಲೇ ನಿರಾಕರಣೆ ವ್ಯಕ್ತಪಡಿಸಿದ್ದು, ತಮ್ಮ ಆಸ್ತಿ ವ್ಯವಹಾರಗಳು ಕಾನೂನುಬದ್ಧವಾಗಿವೆ ಎಂದು ಹೇಳಿದ್ದಾರೆ.

ನೈಸ್ ರಸ್ತೆಯ ಸುತ್ತಮುತ್ತ ಮುಖ್ಯಮಂತ್ರಿ ಹಾಗೂ ಅವರ ಕುಟುಂಬದವರು 200-300 ಎಕರೆ ಭೂಮಿ ಖರೀದಿಸಿದ್ದಾರೆ ಎಂಬ ಆರೋಪವನ್ನೂ ಮಾಡಿದ ಅವರು, ಬಡ ಭೂಮಾಲೀಕರು ಹಾಗೂ ಸಿದ್ದಗಂಗಾ ಮಠಕ್ಕೆ ನಿರಾಪೇಕ್ಷಣಾ ಪತ್ರ ನೀಡದಿರುವಾಗ ಇಂತಹ ಭೂ ವ್ಯವಹಾರಗಳು ಹೇಗೆ ನಡೆದವು ಎಂದು ಪ್ರಶ್ನಿಸಿದರು.

**'ನೈಸ್ ರಸ್ತೆಯನ್ನು ರಾಜ್ಯಕ್ಕೆ ಉಳಿಸುತ್ತೇನೆ':** ನೈಸ್ ಯೋಜನೆ ವಿಚಾರದಲ್ಲಿ ರಾಜಿ ಮಾಡಿಕೊಳ್ಳುವಂತೆ ಕೆಲವರು ತಮ್ಮ ಮೇಲೆ ಒತ್ತಡ ಹೇರಲು ಪ್ರಯತ್ನಿಸಿದ್ದರು. ಆದರೆ ಯಾವುದೇ ಆಮಿಷಕ್ಕೆ ತಾನು ಮಣಿಯುವುದಿಲ್ಲ ಎಂದು ಕುಮಾರಸ್ವಾಮಿ ಹೇಳಿದರು. ನೈಸ್ ಭೂ ಸಂತ್ರಸ್ತರು ಹಾಗೂ ರಾಜ್ಯದ ಜನರೊಂದಿಗೆ ಸೇರಿ ಹೋರಾಟ ನಡೆಸಿ, ನೈಸ್ ರಸ್ತೆಯನ್ನು ರಾಜ್ಯಕ್ಕೆ ಉಳಿಸಿಕೊಡಲು ಪ್ರಯತ್ನಿಸುವುದಾಗಿ ತಿಳಿಸಿದರು.

ಮುಖ್ಯಮಂತ್ರಿ ಶಿವಕುಮಾರ್ ಅವರನ್ನು ಶಿಶುಪಾಲನಿಗೆ ಹೋಲಿಸಿದ ಕುಮಾರಸ್ವಾಮಿ, ಭೂ ವ್ಯವಹಾರಗಳಲ್ಲಿ ದುರಾಸೆ ತೋರಿಸಲಾಗುತ್ತಿದೆ ಎಂದು ಆರೋಪಿಸಿದರು. ನೈಸ್ ಯೋಜನೆಯ ಒಪ್ಪಂದ ಅವಧಿ ಮುಗಿಯುವ ಮುನ್ನವೇ ಯೋಜನೆಗೆ ಸಂಬಂಧಿಸಿದ ಆಸ್ತಿಗಳ ಮೇಲೆ ಹಿಡಿತ ಸಾಧಿಸುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು.

### ಖೇಣಿ ವಿರುದ್ಧ ಕ್ರಮಕ್ಕೆ ಆಗ್ರಹ

ಸಿದ್ದಗಂಗಾ ಮಠದ ಹಿರಿಯ ಶ್ರೀಗಳ ಕುರಿತು ನೈಸ್ ಮುಖ್ಯಸ್ಥ ಅಶೋಕ್ ಖೇಣಿ ನೀಡಿರುವ ಹೇಳಿಕೆಗಳ ಹಿನ್ನೆಲೆಯಲ್ಲಿ ಅವರ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕುಮಾರಸ್ವಾಮಿ ಆಗ್ರಹಿಸಿದರು. ಖೇಣಿಗೆ ಸರ್ಕಾರ ರಕ್ಷಣೆ ನೀಡುತ್ತಿದೆ ಎಂದು ಆರೋಪಿಸಿದ ಅವರು, ಮಠದ ಆಸ್ತಿಗೆ ಸಂಬಂಧಿಸಿದ ವಿಚಾರಗಳ ಬಗ್ಗೆಯೂ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು. ನೈಸ್ ಯೋಜನೆಗೆ ಸಂಬಂಧಿಸಿದ ಭೂ ವ್ಯವಹಾರಗಳು ಹಾಗೂ ಯೋಜನೆಯ ಅನುಷ್ಠಾನ ಕುರಿತು ಕುಮಾರಸ್ವಾಮಿ ಹಲವು ಆರೋಪಗಳನ್ನು ಮಾಡುತ್ತಿದ್ದು, ಈ ಆರೋಪಗಳನ್ನು ಶಿವಕುಮಾರ್ ತಳ್ಳಿಹಾಕಿದ್ದಾರೆ.

## ಶಾಸಕರ ಭವನದ ಬಳಿ ವಾಲ್ಮೀಕಿ ತಪೋವನ ಅಭಿವೃದ್ಧಿಗೆ ನಿರ್ಧಾರ

● ವಿಕ್ರಮ ವಾಹಿನಿ । ಬೆಂಗಳೂರು

ವಿಧಾನಸೌಧದ ಸಮೀಪ ಶಾಸಕರ ಭವನದ ಮುಂಭಾಗದಲ್ಲಿರುವ ಮಹರ್ಷಿ ವಾಲ್ಮೀಕಿ ಪ್ರತಿಮೆ ಸುತ್ತಮುತ್ತಲಿನ ಎರಡು ಎಕರೆ ಪ್ರದೇಶವನ್ನು ತಪೋವನವಾಗಿ ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ತಿಳಿಸಿದರು.

ವಿಧಾನಸೌಧದಲ್ಲಿ ಶನಿವಾರ ಪರಿಶಿಷ್ಟ ಪಂಗಡಗಳ ಕಲ್ಯಾಣ, ಲೋಕೋಪಯೋಗಿ, ಪೊಲೀಸ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಅವರು ಮಾತನಾಡಿದರು.

ಹಂಪಿಯ ಹಜಾರ ರಾಮಸ್ವಾಮಿ ದೇವಾಲಯದ ಮಾದರಿಯಲ್ಲಿ ತಪೋವನವನ್ನು ಅಭಿವೃದ್ಧಿಪಡಿಸಲಾಗುವುದು. ವಾಲ್ಮೀಕಿ ಹಾಗೂ ರಾಮಾಯಣದ ಪರಿಕಲ್ಪನೆಯಡಿ ಇಡೀ ಪ್ರದೇಶದಲ್ಲಿ ಕಲ್ಲಿನ ಕೆತ್ತನೆಗಳನ್ನು ಅಳವಡಿಸಲಾಗುತ್ತದೆ. ವಿಶೇಷ ವಿನ್ಯಾಸದ ಭೂದೃಶ್ಯ ನಿರ್ಮಾಣದ ಜತೆಗೆ ಧ್ವನಿವರ್ಧಕ, ವಿದ್ಯುತ್ ದೀಪಾಲಂಕಾರ ಹಾಗೂ ಸೌಂದರ್ಯೀಕರಣಕ್ಕೂ ಆದ್ಯತೆ ನೀಡಲಾಗುವುದು ಎಂದರು.

ಈ ಸಂಬಂಧ ಸಮಗ್ರ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುವಂತೆ ಲೋಕೋಪಯೋಗಿ ಇಲಾಖೆಗೆ ಸೂಚಿಸಲಾಗಿದೆ. ತಪೋವನವನ್ನು ಸಾರ್ವಜನಿಕರ ವೀಕ್ಷಣೆಗೆ ಮುಕ್ತಗೊಳಿಸುವ ಬಗ್ಗೆಯೂ ಪರಿಶೀಲಿಸಲಾಗುವುದು ಎಂದು ತಿಳಿಸಿದರು.



ಸಭೆಯ ಬಳಿಕ ಸಚಿವರು ಹಾಗೂ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಒಂದು ಗಂಟೆಗೂ ಹೆಚ್ಚು ಕಾಲ ಪರಿಶೀಲನೆ ನಡೆಸಿದರು. ತಪೋವನದಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಗಳು, ವಿನ್ಯಾಸ ಹಾಗೂ ಸೌಲಭ್ಯಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ಎಂ. ಕನಗವಲ್ಲಿ, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅಶೋಕ್ ದುಡಗಂಟಿ, ಇಲಾಖೆಯ ನಿರ್ದೇಶಕ ಅಶೋಕ್ ಡಿ.ಆರ್., ಮುಖ್ಯ ವಾಸ್ತುಶಿಲ್ಪಿ ರಾಜೇಶ್ವರಿ ಬಸೂರು ಸೇರಿದಂತೆ ಲೋಕೋಪಯೋಗಿ, ಪೊಲೀಸ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಶಾಸಕರ ಭವನದ ಮುಂದಿರುವ ವಾಲ್ಮೀಕಿ ಪ್ರತಿಮೆ ಇರುವ ಜಾಗಕ್ಕೆ ಇದುವರೆಗೆ ಸಾರ್ವಜನಿಕರಿಗೆ ಮುಕ್ತ ಪ್ರವೇಶ ಇರಲಿಲ್ಲ. ಆದರೆ ಈಗ ಇದಕ್ಕೆ ಅವಕಾಶ ಕಲ್ಪಿಸುವ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಸಚಿವ ರಘುಮೂರ್ತಿ ತಿಳಿಸಿದರು.

ಭದ್ರತೆ ದೃಷ್ಟಿಯಿಂದ ವಿಧಾನಸಭೆ ಹಾಗೂ ಪರಿಷತ್‌ನ ಸೆಕ್ರೇಟರಿಯೇಟ್ ಅನುಮತಿ ನೀಡಬೇಕು ಎಂದು ಪೊಲೀಸ್ ಅಧಿಕಾರಿಗಳು ವಿವರಿಸಿದರು. ಈ ಕುರಿತು ಸಂಬಂಧಪಟ್ಟವರೊಂದಿಗೆ ಚರ್ಚಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡುವ ಕುರಿತು ಅತಿ ಶೀಘ್ರದಲ್ಲೇ ಚರ್ಚೆ ಮಾಡಿ ನಿರ್ಧಾರ ಕೈಗೊಳ್ಳಲಾಗುವುದು. ಒಂದು ವೇಳೆ ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಿದ ನಂತರ 24/7 ಭದ್ರತೆ ಒದಗಿಸುವ ಬಗ್ಗೆ ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

PRGI NO: KARKAN/2018/78481

# ಲಾಭದತ್ತ ಭದ್ರಾವತಿಯ ವಿಶ್ವೇಶ್ವರಯ್ಯ ಉಕ್ಕು ಕಾರ್ಖಾನೆ

● ವಿಕ್ರಮ ವಾಹಿನಿ | ನವದೆಹಲಿ

ನಿರಂತರ ನಷ್ಟದಿಂದ ಸಂಕಷ್ಟಕ್ಕೆ ಸಿಲುಕಿದ್ದ ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ (ವಿಐಎಸ್‌ಎಲ್) ಇದೀಗ ಚೇತರಿಕೆಯ ಹಾದಿಯಲ್ಲಿದ್ದು, ಸತತ ಮೂರನೇ ತಿಂಗಳೂ ನಿವ್ವಳ ಲಾಭ ದಾಖಲಿಸಿದೆ ಎಂದು ಕೇಂದ್ರ ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಉಕ್ಕು ಕ್ಷೇತ್ರವನ್ನು ಬಲಪಡಿಸಲು ಕೈಗೊಳ್ಳಲಾಗುತ್ತಿರುವ ಕ್ರಮಗಳ ಭಾಗವಾಗಿ ವಿಐಎಸ್‌ಎಲ್‌ನ ಕಾರ್ಯಕ್ಷಮತೆ ಸುಧಾರಿಸುತ್ತಿದೆ. ಕಾರ್ಖಾನೆಯ ಕಾರ್ಮಿಕರು ಹಾಗೂ ಸಿಬ್ಬಂದಿಯ ನಿರಂತರ ಪರಿಶ್ರಮ, ಬದ್ಧತೆ ಮತ್ತು ಸಾಮೂಹಿಕ ಪ್ರಯತ್ನದಿಂದ ಈ ಪ್ರಗತಿ ಸಾಧ್ಯವಾಗಿದೆ ಎಂದು ಅವರು ಹೇಳಿದ್ದಾರೆ.

ವಿಐಎಸ್‌ಎಲ್ ಜುಲೈನಲ್ಲಿ ರೂ 33 ಲಕ್ಷ, ಆಗಸ್ಟ್‌ನಲ್ಲಿ ರೂ 1.71 ಕೋಟಿ ಹಾಗೂ ಸೆಪ್ಟೆಂಬರ್‌ನಲ್ಲಿ ರೂ 1.96 ಕೋಟಿ ನಿವ್ವಳ ಲಾಭ ದಾಖಲಿಸಿದೆ. 2025ರ ಸೆಪ್ಟೆಂಬರ್‌ನಲ್ಲಿ ರೂ 3.78 ಕೋಟಿ ನಷ್ಟವಾಗಿದ್ದರೆ, 2026ರ ಸೆಪ್ಟೆಂಬರ್‌ನಲ್ಲಿ ರೂ 1.96 ಕೋಟಿ ಲಾಭ ಗಳಿಸಿರುವುದು ಆರ್ಥಿಕ ಕಾರ್ಯಕ್ಷಮತೆಯ ಸುಧಾರಣೆಯನ್ನು ತೋರಿಸುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

ಸೆಪ್ಟೆಂಬರ್‌ನಲ್ಲಿ ಕಾರ್ಖಾನೆಯ ನಿವ್ವಳ ಆದಾಯವೂ ಗಣನೀಯವಾಗಿ ಏರಿಕೆಯಾಗಿದೆ. 2025ರ ಸೆಪ್ಟೆಂಬರ್‌ನಲ್ಲಿ ರೂ 27.48 ಕೋಟಿಯಷ್ಟಿದ್ದ ಆದಾಯ, 2026ರ ಸೆಪ್ಟೆಂಬರ್‌ನಲ್ಲಿ ರೂ 51.87 ಕೋಟಿಗೆ ಹೆಚ್ಚಾಗಿದೆ. ಸೆಪ್ಟೆಂಬರ್‌ವರೆಗೆ ಪ್ರಸಕ್ತ ಅವಧಿಯಲ್ಲಿ ಕಾರ್ಖಾನೆಯ ನಿವ್ವಳ ನಷ್ಟ ರೂ 2.03 ಕೋಟಿಗೆ ಇಳಿದಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ ರೂ 22.77 ಕೋಟಿ ನಷ್ಟ ದಾಖಲಾಗಿತ್ತು. ಈ ಮೂಲಕ ರೂ 20 ಕೋಟಿಗೂ ಅಧಿಕ ಸುಧಾರಣೆ ಕಂಡುಬಂದಿದೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

ಕಾರ್ಖಾನೆಯ ಕಾರ್ಯಕ್ಷಮತೆಯನ್ನು ಸುಧಾರಿಸುವಲ್ಲಿ ಶ್ರಮಿಸಿದ ಕಾರ್ಮಿಕರು ಹಾಗೂ ಇಡೀ ತಂಡವನ್ನು ಅಭಿನಂದಿಸಿದ ಅವರು, ಇದೇ ವೇಗವನ್ನು ಮುಂದುವರಿಸಿ ಘಟಕವನ್ನು ಮತ್ತಷ್ಟು ಬಲಿಷ್ಠ ಮತ್ತು ಸುಸ್ಥಿರ ಭವಿಷ್ಯದತ್ತ ಕೊಂಡೊಯ್ಯಬೇಕು ಎಂದು ಕರೆ ನೀಡಿದರು.

# ರಾಜ್ಯಕ್ಕೆ 3705.30 ಕೋಟಿ ರೂ. ಬರ ಪರಿಹಾರ ನೀಡಿ: ಸಿಎಂ ಡಿಕೆಶಿ

● ವಿಕ್ರಮ ವಾಹಿನಿ | ಬೆಂಗಳೂರು

"ಕರ್ನಾಟಕ ರಾಜ್ಯವು ತೀವ್ರ ಬರ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ರೈತರು, ಜನಸಾಮಾನ್ಯ ತೀವ್ರ ಸಂಕಷ್ಟಕ್ಕೊಳಗಾಗಿದ್ದಾರೆ. **NDR**ಈ ಮಾನದಂಡಗಳನ್ವಯ ರಾಜ್ಯಕ್ಕೆ 3705.30 ಕೋಟಿ ರೂ. ಬರ ಪರಿಹಾರ ನೀಡಿ" ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಕೇಂದ್ರ ಬರ ಅಧ್ಯಯನ ತಂಡಕ್ಕೆ ಮನವಿ ಮಾಡಿದರು.

ಬರ ಅಧ್ಯಯನಕ್ಕೆ ರಾಜ್ಯಕ್ಕೆ ಆಗಮಿಸಿರುವ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ನೇತೃತ್ವದ ಕೇಂದ್ರದ ಅಂತರ್ಸಚಿವಾಲಯ ತಂಡದೊಂದಿಗೆ ಅವರು ಶನಿವಾರ ಗೃಹ ಕಚೇರಿ ಕೃಷ್ಣಾದಲ್ಲಿ ಸಮಾಲೋಚನೆ ನಡೆಸಿದರು.

**ರಾಜ್ಯಕ್ಕೆ ನ್ಯಾಯಸಮ್ಮತ ಪರಿಹಾರ ದೊರಕಿಸಿ:** "ರಾಜ್ಯದಲ್ಲಿ 240 ತಾಲ್ಲೂಕುಗಳ ಪೈಕಿ 217 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಯಾವುದೇ ಒತ್ತಡಗಳಿಗೆ ಜಗ್ಗದೆ, ಕೇಂದ್ರ ಸರ್ಕಾರದ ವಿಪತ್ತು ನಿರ್ವಹಣೆಯ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅತ್ಯಂತ ವೈಜ್ಞಾನಿಕವಾಗಿ ಮೌಲ್ಯಮಾಪನ ನಡೆಸಿ ಬರಪೀಡಿತ ತಾಲ್ಲೂಕುಗಳನ್ನು ಘೋಷಿಸಲಾಗಿದೆ" ಎಂದು ತಿಳಿಸಿದರು.

**ರೈತರು ಕಂಗಾಲಾದರೆ ಎಲ್ಲವೂ ಸ್ಥಗಿತಗೊಂಡಂತೆ-ಸಿಎಂ:** "ರೈತರು ಕಂಗಾಲಾದರೆ ಎಲ್ಲವೂ ಸ್ಥಗಿತವಾಗುತ್ತದೆ. ಆದ್ದರಿಂದ ಕೇಂದ್ರ ಸರ್ಕಾರವು ರಾಜ್ಯದ ರೈತರ ನೆರವಿಗೆ ಧಾವಿಸಬೇಕು" ಎಂದು ಮನವಿ ಮಾಡಿದರು.

**ಆಘಾತಕಾರಿ ಪರಿಸ್ಥಿತಿ:** "ನನ್ನ ಹಾಗೂ ಉಪಮುಖ್ಯಮಂತ್ರಿ ಡಾ. ಪರಮೇಶ್ವರ ಅವರ ನಾಲ್ಕು ದಶಕಗಳ ಸಾರ್ವಜನಿಕ ಜೀವನದಲ್ಲಿ ಜನರು ಇಷ್ಟು ತೊಂದರೆಗೊಳಗಾಗಿರುವುದನ್ನು ನೋಡಿಲ್ಲ. ಇದು ಅತ್ಯಂತ ಆಘಾತಕಾರಿ ಪರಿಸ್ಥಿತಿ. ಜನಪ್ರತಿನಿಧಿಗಳು ಹಾಗೂ ರೈತರ ಸಮಸ್ಯೆಗಳನ್ನು ಅರಿಯಲು ವಿಶೇಷ ಅಧಿವೇಶನ ಕರೆಯಲಾಗಿತ್ತು. 150 ಶಾಸಕರು ತಮ್ಮ ಕ್ಷೇತ್ರದ ಸಮಸ್ಯೆಗಳ ಕುರಿತು ಮಾತನಾಡಿದರು" ಎಂದು ವಿವರಿಸಿದರು.

"ರಾಜ್ಯದ ಕೃಷ್ಣಾ ಜಲಾನಯನ ಪ್ರದೇಶ ಹೊರತು ಪಡಿಸಿ ಎಲ್ಲ ಜಲಾಶಯಗಳಲ್ಲಿ ನೀರಿನ ಹರಿವು ಕಡಿಮೆ ಇದೆ. ಮಲೆನಾಡು, ಕರಾವಳಿ ಪ್ರದೇಶಗಳಲ್ಲಿಯೂ ಮಳೆಯ ತೀವ್ರ ಕೊರತೆಯಾಗಿದೆ. ಅದಾಗ್ಯೂ ಕಾವೇರಿ ನದಿಗೆ ನೀರು ಬಿಡುಗಡೆ ಮಾಡುವಂತೆ ಸಿಡಬ್ಲ್ಯುಸಿ ಆದೇಶ ನೀಡುತ್ತಿದೆ. ನಗರ ಪ್ರದೇಶಗಳಲ್ಲಿಯೂ ನೀರಿನ ಸಮಸ್ಯೆ ಎದುರಾಗಿದೆ.

## ಬರ ಪರಿಸ್ಥಿತಿ: ರಾಜ್ಯದ ಪ್ರಮುಖ ಅಂಶಗಳು

- **217 ತಾಲ್ಲೂಕು ಬರಪೀಡಿತ:** ನಾಲ್ಕು ಹಂತಗಳಲ್ಲಿ 217 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಐದನೇ ಹಂತದ ಪರಿಶೀಲನೆ ಪ್ರಗತಿಯಲ್ಲಿದೆ.
- **ರೂ 7,142.64 ಕೋಟಿ ಪರಿಹಾರ:** ಮೊದಲ ಮತ್ತು ಎರಡನೇ ಪ್ರಸ್ತಾವನೆಗಳ ಮೂಲಕ 177 ತಾಲ್ಲೂಕುಗಳಿಗೆ ಪರಿಹಾರ ಕೋರಿ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಉಳಿದ ತಾಲ್ಲೂಕುಗಳಿಗೆ ಅಕ್ಟೋಬರ್ ಎರಡನೇ ವಾರದಲ್ಲಿ ಪ್ರಸ್ತಾವನೆ ಸಲ್ಲಿಸಲಾಗುವುದು.
- **ಶೇ.35 ಮಳೆ ಕೊರತೆ:** ಜೂನ್ 1ರಿಂದ ಸೆಪ್ಟೆಂಬರ್ 30ರವರೆಗೆ ರಾಜ್ಯದಲ್ಲಿ ಒಟ್ಟಾರೆ ಶೇ.35 ಮಳೆ ಕೊರತೆಯಾಗಿದೆ. ದಕ್ಷಿಣ ಒಳನಾಡಿನಲ್ಲಿ ಶೇ.41, ಉತ್ತರ ಒಳನಾಡಿನಲ್ಲಿ ಶೇ.42, ಮಲೆನಾಡಿನಲ್ಲಿ ಶೇ.38 ಹಾಗೂ ಕರಾವಳಿಯಲ್ಲಿ ಶೇ.28 ಕೊರತೆಯಾಗಿದೆ.
- **ದೀರ್ಘ ಶುಷ್ಕ ಅವಧಿ:** 240ರಲ್ಲಿ 237 ತಾಲ್ಲೂಕುಗಳಲ್ಲಿ ಕನಿಷ್ಠ ಮೂರು ವಾರ ಸತತ ಮಳೆಯಾಗಿಲ್ಲ. 120 ತಾಲ್ಲೂಕುಗಳಲ್ಲಿ 4ರಿಂದ 6 ವಾರ ಹಾಗೂ 22 ತಾಲ್ಲೂಕುಗಳಲ್ಲಿ 7ರಿಂದ 10 ವಾರ ಮಳೆ ಬಿದ್ದಿಲ್ಲ.
- **ಬಿತ್ತನೆ ಕುಂಠಿತ:** 84.10 ಲಕ್ಷ ಹೆಕ್ಟೇರ್ ಗುರಿಗೆ 69.57 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದ್ದು, ಶೇ.83 ಸಾಧನೆಯಾಗಿದೆ.
- **ಜಲಾಶಯಗಳಲ್ಲಿ ನೀರಿನ ಕೊರತೆ:** 13 ಪ್ರಮುಖ ಜಲಾಶಯಗಳಲ್ಲಿ 529 ಟಿಎಂಸಿ ನೀರಿದ್ದು, ಒಟ್ಟು ಸಾಮರ್ಥ್ಯದ ಶೇ.65ರಷ್ಟು ಮಾತ್ರ ಭರ್ತಿಯಾಗಿದೆ. ಕಳೆದ 10 ವರ್ಷಗಳ ಸರಾಸರಿಗೆ ಹೋಲಿಸಿದರೆ ಒಳಹರಿವು ಕಡಿಮೆಯಾಗಿದೆ.
- **ಕೆರೆಗಳಲ್ಲೂ ನೀರಿನ ಕೊರತೆ:** ಶೇ.30ಕ್ಕಿಂತ ಕಡಿಮೆ ನೀರಿರುವ ಸಣ್ಣ ನೀರಾವರಿ ಕೆರೆಗಳ ಸಂಖ್ಯೆ 2025ರ 885ರಿಂದ 2026ರಲ್ಲಿ 2,224ಕ್ಕೆ ಏರಿಕೆಯಾಗಿದೆ.
- **ಅಂತರ್ಜಲ ಕುಸಿತ:** 2025ಕ್ಕೆ ಹೋಲಿಸಿದರೆ 200 ತಾಲ್ಲೂಕುಗಳಲ್ಲಿ ಹಾಗೂ 2016-25ರ ದಶಕದ ಸರಾಸರಿಗೆ ಹೋಲಿಸಿದರೆ 153 ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟ ಕುಸಿದಿದೆ.
- **ಬೆಳೆ ನಷ್ಟ:** 101 ತಾಲ್ಲೂಕುಗಳಲ್ಲಿ 19.52 ಲಕ್ಷ ಹೆಕ್ಟೇರ್ ಹಾಗೂ 76 ತಾಲ್ಲೂಕುಗಳಲ್ಲಿ 26.08 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟ ಅಂದಾಜಿಸಲಾಗಿದೆ. ಎನ್‌ಡಿಆರ್‌ಎಫ್ ಮಾನದಂಡದಡಿ ಕ್ರಮವಾಗಿ ರೂ 2,017.26 ಕೋಟಿ ಹಾಗೂ ರೂ 2,918.34 ಕೋಟಿ ನಷ್ಟ ಅಂದಾಜಿಸಲಾಗಿದೆ.
- **ಬೆಳೆ ವಿಮೆಯಲ್ಲಿ ದಾಖಲೆ:** 37.50 ಲಕ್ಷ ರೈತರು 28.48 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ಬೆಳೆ ವಿಮೆ ನೋಂದಾಯಿಸಿಕೊಂಡಿದ್ದು, ಕಳೆದ 10 ವರ್ಷಗಳಲ್ಲೇ ಇದು ಗರಿಷ್ಠವಾಗಿದೆ.
- **ಮೇವಿನ ಲಭ್ಯತೆ:** ರಾಜ್ಯದಲ್ಲಿ 30 ವಾರಗಳಿಗೆ ಸಾಕಾಗುವಷ್ಟು ಮೇವು ಲಭ್ಯವಿದ್ದು, ಮೇವು ಮಿನಿಕಿಟ್‌ಗಳಿಗೆ ರೂ 25 ಕೋಟಿ ಮಂಜೂರು ಮಾಡಲಾಗಿದೆ.
- **ಹಾಲು ಉತ್ಪಾದನೆ ಇಳಿಕೆ:** ಜೂನ್‌ನಲ್ಲಿ ದಿನಕ್ಕೆ 115.58 ಲಕ್ಷ ಕೆ.ಜಿ. ಇದ್ದ ಹಾಲು ಉತ್ಪಾದನೆ ಸೆಪ್ಟೆಂಬರ್‌ನಲ್ಲಿ 108.09 ಲಕ್ಷ ಕೆ.ಜಿಗೆ ಇಳಿಕೆಯಾಗಿದೆ.
- **ಕುಡಿಯುವ ನೀರಿನ ಸಮಸ್ಯೆ:** 110 ತಾಲ್ಲೂಕುಗಳ 548 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನೀರಿನ ಸಮಸ್ಯೆ ಇದ್ದು, 225 ಗ್ರಾಮಗಳಿಗೆ ಟ್ಯಾಂಕರ್ ಹಾಗೂ 636 ಗ್ರಾಮಗಳಿಗೆ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ.
- **ನಗರಗಳಲ್ಲೂ ಸಂಕಷ್ಟ:** ಏಳು ಜಿಲ್ಲೆಗಳ 15 ನಗರ ಸ್ಥಳೀಯ ಸಂಸ್ಥೆಗಳ 81 ವಾರ್ಡ್‌ಗಳಿಗೆ ಟ್ಯಾಂಕರ್ ಹಾಗೂ 21 ವಾರ್ಡ್‌ಗಳಿಗೆ ಕೊಳವೆಬಾವಿ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿದೆ.

ರೈತರಿಗೆ ರಾಜ್ಯ ಸರ್ಕಾರದ ಹಂತದಲ್ಲಿ 2500 ರೂ. ಪರಿಹಾರ ಮೊತ್ತ ಘೋಷಿಸಲಾಗಿದೆ. ಆದರೆ ಕೇಂದ್ರದಿಂದ ಹೆಚ್ಚಿನ ಸಹಕಾರವನ್ನು ನಿರೀಕ್ಷಿಸುತ್ತಿದ್ದೇವೆ" ಎಂದರು.

**ಮುನ್ನೆಚ್ಚರಿಕೆಯ ಕ್ರಮ:** "ರಾಜ್ಯ ಸರ್ಕಾರದ ಎಲ್ಲ ಸಚಿವರೂ ಜಿಲ್ಲೆಗಳಿಗೆ ಭೇಟಿ ನೀಡಿ ವಸ್ತುಸ್ಥಿತಿ ಪರಿಶೀಲನೆ ನಡೆಸಿದ್ದಾರೆ. ಅಧಿಕಾರಿಗಳೂ ತಮ್ಮ ಇಲಾಖೆಗಳಿಗೆ ಸಂಬಂಧಿಸಿದಂತೆ ಮುನ್ನೆಚ್ಚರಿಕೆ, ಪರಿಹಾರ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ. ಮಾನ್ಯ ಪ್ರಧಾನಮಂತ್ರಿಯವರು ಬರ ಪರಿಸ್ಥಿತಿಯ ಕುರಿತು ರಾಜ್ಯಕ್ಕೆ ಭೇಟಿ ನೀಡಿದಾಗ ಮುನ್ನೆಚ್ಚರಿಕೆ ನೀಡಿದ್ದರು. ಅದರಂತೆ ನಾನೂ ಸಚಿವ ಸಂಪುಟ ಸಹೋದ್ಯೋಗಿಗಳು ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದ್ದೆನು. ರೈತರಿಗೂ ಬಿತ್ತನೆ ಕುರಿತು ಮಾರ್ಗದರ್ಶನ ನೀಡಲಾಗಿತ್ತು" ಎಂದು ವಿವರಿಸಿದರು.

"ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ಕಬ್ಬು ಬೆಳೆಗಾರರು ಹೆಚ್ಚಿನ ಬೆಲೆಗೆ ಒತ್ತಾಯಿಸುತ್ತಿದ್ದಾರೆ. ಅಂತೆಯೇ ಹಾಲು ಉತ್ಪಾದಕರೂ ಕನಿಷ್ಠ 10 ರೂ. ದರ ಏರಿಕೆಗೆ ಒತ್ತಾಯಿಸುತ್ತಿದ್ದಾರೆ. ಈ ಸವಾಲಿನ ಪರಿಸ್ಥಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜೊತೆಯಾಗಿ ಕೆಲಸ ಮಾಡೋಣ" ಎಂದು ಕರೆ ನೀಡಿದರು.

**ವಸ್ತುನಿಷ್ಠ ವರದಿ ಸಲ್ಲಿಕೆ: ಕೇಂದ್ರ ತಂಡ ಮುಖ್ಯಸ್ಥರ ಭರವಸೆ:** ಮುಖ್ಯಮಂತ್ರಿಗಳ ಮನವಿಗೆ ಪ್ರತಿಕ್ರಿಯೆ ನೀಡಿದ ಕೇಂದ್ರ ಬರ ಪರಿಸ್ಥಿತಿ ಅಧ್ಯಯನ ತಂಡದ ಮುಖ್ಯಸ್ಥ ಅಜಿತ್ ಕುಮಾರ್ ಸಾಹು ಅವರು ಮಾತನಾಡಿ, "ತಾವು ಮೂರು ದಿನಗಳ ಕಾಲ ರಾಜ್ಯದಲ್ಲಿ ಪ್ರವಾಸ ಮಾಡಿ ವಸ್ತುಸ್ಥಿತಿ ಅರಿಯುವುದರೊಂದಿಗೆ ದತ್ತಾಂಶಗಳನ್ನೂ ರಾಜ್ಯ ಸರ್ಕಾರದ ಅಧಿಕಾರಿಗಳಿಂದ ಪಡೆದುಕೊಂಡು ವಸ್ತುನಿಷ್ಠ ವರದಿ ಸಲ್ಲಿಸುವುದಾಗಿ" ತಿಳಿಸಿದರು.

ಈ ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಡಾ. ಉಮಾ ಮಹಾದೇವನ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



**ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶನಿವಾರ ರಾಜ್ಯಕ್ಕೆ ಆಗಮಿಸಿರುವ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ನೇತೃತ್ವದ ಕೇಂದ್ರದ ಅಂತರ್ಸಚಿವಾಲಯ ತಂಡದೊಂದಿಗೆ ಸಮಾಲೋಚನೆ ನಡೆಸಿ, ರಾಜ್ಯದ ಬರ ಪರಿಸ್ಥಿತಿ ಕುರಿತು ವರದಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಡಾ. ಉಮಾ ಮಹಾದೇವನ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.**

# ಸರ್ಕಾರದ ಬೆದರಿಕೆಗೆ ಹೆದರುವುದಿಲ್ಲ: ಆರ್. ಅಶೋಕ್

● ವಿಕ್ರಮ ವಾಹಿನಿ | ಬೆಂಗಳೂರು

ಪೊಲೀಸ್ ಇಲಾಖೆಯನ್ನು ಬಳಸಿಕೊಂಡು ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್ ದಾಖಲಿಸಿದರೆ ಸರ್ಕಾರದ ಒತ್ತಡಕ್ಕೆ ಮಣಿಯುವುದಿಲ್ಲ. ಕಾರ್ಯಕರ್ತರ ಬಂಧನವಾದರೆ ಪೊಲೀಸ್ ಠಾಣೆಗಳ ಮುಂದೆ ಹೋರಾಟ ನಡೆಸಲಾಗುವುದು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಎಚ್ಚರಿಸಿದರು.

ರಾಜ್ಯ ಪೊಲೀಸ್ ನಿರ್ದೇಶಕರಿಗೆ ಮನವಿ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಒತ್ತಡಕ್ಕೆ ಮಣಿದು ಪೊಲೀಸ್ ಠಾಣೆಗಳು ಕಾಂಗ್ರೆಸ್ ಕಚೇರಿಗಳಂತೆ ಕಾರ್ಯನಿರ್ವಹಿಸುವಂತಾದರೆ ಸುಮ್ಮನೆ ಕೂರುವುದಿಲ್ಲ ಎಂದರು. ಎಸ್‌ಐಆರ್‌ಗೆ ಸಂಬಂಧಿಸಿದಂತೆ ಕಾರ್ಯಕರ್ತರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಮುನ್ನ ಪೊಲೀಸರು ಹತ್ತು ಬಾರಿ ಯೋಚಿಸಬೇಕು ಎಂದು ಹೇಳಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಹೊಸದಲ್ಲ. ಸ್ವಾತಂತ್ರ್ಯಾನಂತರದಿಂದಲೂ ಮತದಾರರ ಹೆಸರು ಸೇರ್ಪಡೆ ಹಾಗೂ ತೆಗೆದುಹಾಕುವ ಪ್ರಕ್ರಿಯೆ ನಡೆಯುತ್ತಿದೆ. ಆದರೆ, ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಒಂದು ರೀತಿಯ ಮತ್ತು ಸೋತಾಗ ಮತ್ತೊಂದು ರೀತಿಯ ನಿಲುವು ತಾಳುತ್ತಿದೆ ಎಂದು ಅವರು ಆರೋಪಿಸಿದರು.

ಚುನಾವಣಾ ಆಯೋಗದ ಕಚೇರಿ ಎದುರು ಮುಖ್ಯಮಂತ್ರಿ ಧರಣಿ ನಡೆಸಿದ್ದನ್ನು ಉಲ್ಲೇಖಿಸಿದ ಅಶೋಕ್, ಇದೀಗ ಬಿಜೆಪಿ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು. ಯಾವುದೇ ಕಾರಣಕ್ಕೂ ಕಾರ್ಯಕರ್ತರನ್ನು ಬಂಧಿಸಬಾರದು; ಬಂಧಿಸಿದರೆ ಸಂಬಂಧಿಸಿದ ಪೊಲೀಸ್ ಠಾಣೆಗಳಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು. ರಾಜ್ಯ ಸರ್ಕಾರ ಇನ್ನೂ ಒಂದು ವರ್ಷ ಅಧಿಕಾರದಲ್ಲಿದ್ದು, ಇರುವ ಅವಧಿಯಲ್ಲಿ ಗೌರವಯುತವಾಗಿ ನಡೆದುಕೊಳ್ಳಬೇಕು. ಮತದಾರರ ಪಟ್ಟಿಗೆ ಅಕ್ರಮವಾಗಿ ಹೆಸರು ಸೇರ್ಪಡೆ ಮಾಡುವ ಯಾವುದೇ ಪ್ರಯತ್ನಕ್ಕೆ ಅವಕಾಶ ನೀಡುವುದಿಲ್ಲ ಎಂದು ಅಶೋಕ್ ಹೇಳಿದರು.

# ರಾಜ್ಯಾದ್ಯಂತ ಹೋರಾಟ: ಬಿ.ಎಸ್.ಯಡಿಯೂರಪ್ಪ ಎಚ್ಚರಿಕೆ

● ವಿಕ್ರಮ ವಾಹಿನಿ | ಬೆಂಗಳೂರು

ಎಸ್‌ಐಆರ್ ಸಂಬಂಧ ಬಿಜೆಪಿ ಕಾರ್ಯಕರ್ತರ ಮೇಲೆ ಪೊಲೀಸ್ ಇಲಾಖೆ ಕಾನೂನು ಕ್ರಮ ಜಾರಿಗೊಳಿಸುವುದು, ಕಿರುಕುಳ ನೀಡಿದರೆ ರಾಜ್ಯದಾದ್ಯಂತ ಹೋರಾಟ ಮಾಡಲಾಗುವುದು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಎಚ್ಚರಿಸಿದ್ದಾರೆ.

ಎಸ್‌ಐಆರ್ ಸಂದರ್ಭದಲ್ಲಿ ಸಲ್ಲಿಸಲಾದ ನಮೂನೆ 7 ಅರ್ಜಿಗಳಿಗೆ ಸಂಬಂಧಿಸಿದ ಕ್ರಿಮಿನಲ್ ಪ್ರಕ್ರಿಯೆಗಳನ್ನು ಕಾನೂನು ಅನುಸಾರ ಕೈಗೊಳ್ಳಬೇಕು ಎಂದು ಆಗ್ರಹಿಸಿ ಇಂದು ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರಿಗೆ ಮನವಿ ಸಲ್ಲಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದರು.

ಇಡೀ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಯಾವುದೇ ಕಾರಣಕ್ಕೂ ಕಾರ್ಯಕರ್ತರ ಮೇಲೆ ಕಾನೂನು ಕ್ರಮವಾಗಬಾರದು. ಅವರನ್ನು



ಬಂಧಿಸುವುದು, ಅವರಿಗೆ ಕಿರುಕುಳ, ಹಲ್ಲೆ ನಡೆಯಬಾರದು. ಇದು ಏನಾದರೂ ಮುಂದುವರಿದರೆ ರಾಜ್ಯದಾದ್ಯಂತ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡದಂತೆ ನೋಡಿಕೊಳ್ಳುವುದು ಪೊಲೀಸರ ಜವಾಬ್ದಾರಿ. ಒಂದು ರಾಷ್ಟ್ರೀಯ ಪಕ್ಷವಾಗಿ ಬಿಜೆಪಿ ಯಾವ ರೀತಿ ನಡೆದುಕೊಳ್ಳಬೇಕು ಹಾಗೆ ನಡೆದುಕೊಳ್ಳುತ್ತಿದೆ. ನಮಗೂ ಜವಾಬ್ದಾರಿ ಇದೆ. ನಮ್ಮ ಕಾರ್ಯಕರ್ತರ ಮೇಲಿನ ಎಲ್ಲಾ ಕ್ರಮಗಳು ಈ ತಕ್ಷಣದಿಂದಲೇ ನಿಲ್ಲಬೇಕು ಎಂದು ಹೇಳಿದರು.

ಚುನಾವಣಾ ಆಯೋಗದ ಕಚೇರಿಗೆ ಬಂದು ಧರಣಿ ನಡೆಸಿದ ಮುಖ್ಯಮಂತ್ರಿಗಳಿಗೆ ನಾಚಿಕೆ ಆಗಬೇಕು. ಅವರೇ ಬಂದು ಆಯುಕ್ತರಿಗೆ ಆಗ್ರಹಿಸುವುದು, ಒತ್ತಡ ಹೇರುವುದು ನಾಚಿಕೆಗೇಡಿನ ಕೆಲಸ. ನಾವು ಈಗಾಗಲೇ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಮನವಿ ಸಲ್ಲಿಸಿದ್ದೇವೆ.

ನಮ್ಮ ಮನವಿ ಸರಿ ಇದ್ದರೆ ಕ್ರಮ ಕೈಗೊಳ್ಳಲಿ. ರಾಜ್ಯದ ಮುಖ್ಯಮಂತ್ರಿಗಳ ಮಾತು ಕೇಳಿ ಕಾರ್ಯಕರ್ತರಿಗೆ ಕಿರುಕುಳ ನೀಡಬಾರದು. ಪೊಲೀಸ್ ಅಧಿಕಾರಿಗಳು ಸರ್ಕಾರವನ್ನು ಮೆಚ್ಚಿಸಲು ಕೆಲಸ ಮಾಡುವ ಬದಲು ಕಾನೂನು ಪ್ರಕಾರ ಕೆಲಸ ಮಾಡಲಿ ಎಂದು ಆಗ್ರಹಿಸಿದರು.

# ಫಾರ್ಮ್–7: ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್ ದಾಖಲಿಸಿದರೆ ಹೋರಾಟ: ವಿಜಯೇಂದ್ರ

● ವಿಕ್ರಮ ವಾಹಿನಿ | ಬೆಂಗಳೂರು

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಫಾರ್ಮ್–7 ಸಲ್ಲಿಸಿದ ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್ ದಾಖಲಿಸುವುದನ್ನು ಮುಂದುವರಿಸಿದರೆ ಕಾನೂನು ಹಾಗೂ ರಾಜಕೀಯ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಎಚ್ಚರಿಸಿದರು.

ನೃಪತುಂಗ ರಸ್ತೆಯಲ್ಲಿರುವ ಪೊಲೀಸ್ ಮಹಾನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಡಿಜಿಪಿಗೆ ಮನವಿ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫಾರ್ಮ್–7 ಸಲ್ಲಿಸುವುದು ಚುನಾವಣಾ ಆಯೋಗ ನೀಡಿರುವ ಕಾನೂನುಬದ್ಧ ಅವಕಾಶ. ಅರ್ಜಿಯಲ್ಲಿನ ಆಕ್ಷೇಪಣೆ ಸರಿ ಇದ್ದರೆ ಚುನಾವಣಾಧಿಕಾರಿಗಳು ಪರಿಗಣಿಸುತ್ತಾರೆ; ತಪ್ಪಿದ್ದರೆ ತಿರಸ್ಕರಿಸುತ್ತಾರೆ.

ರಾಜ್ಯ ಸರ್ಕಾರದ ಒತ್ತಡಕ್ಕೆ ಮಣಿದು ಬಿಜೆಪಿ ಕಾರ್ಯಕರ್ತರ ವಿರುದ್ಧ ಬಿಎನ್‌ಎಸ್ ಅಡಿ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಆರೋಪಿಸಿದ ವಿಜಯೇಂದ್ರ, "ಪೊಲೀಸ್ ಇಲಾಖೆ ರಾಜಕೀಯ ಒತ್ತಡಕ್ಕೆ ಮಣಿದು ಕಾನೂನು ಉಲ್ಲಂಘನೆಗೆ ಅವಕಾಶ ನೀಡಬಾರದು. ಫಾರ್ಮ್–7 ವಿಚಾರದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಚುನಾವಣಾ ಆಯೋಗದ ಮುಂದೆ ಧರಣಿ ನಡೆಸಿದ ಬಳಿಕ ಪ್ರಕರಣ ದಾಖಲಿಸುವ ಪ್ರಕ್ರಿಯೆ ಆರಂಭವಾಗಿದೆ ಎಂದು ದೂರಿದರು. ವಿರೋಧ ಪಕ್ಷದ ನಾಯಕರು, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಡಿಜಿಪಿಗೆ ಮನವಿ ಸಲ್ಲಿಸಲಾಗಿದೆ ಎಂದರು.

"ಅಧಿಕಾರ ಯಾರಪ್ಪನ ಮನೆಯ ಆಸ್ತಿಯಲ್ಲ. ನಮ್ಮ ಕಾರ್ಯಕರ್ತರ ವಿರುದ್ಧ ಅನ್ಯಾಯವಾಗಿ ಪ್ರಕರಣ ದಾಖಲಿಸಿದರೆ ಸುಮ್ಮನೆ ಕೂರುವುದಿಲ್ಲ. ಕಾನೂನಾತ್ಮಕ ಹೋರಾಟದ ಜತೆಗೆ ಅಗತ್ಯವಿದ್ದರೆ ಬೀದಿಗಿಳಿದು ಪ್ರತಿಭಟನೆ ನಡೆಸುತ್ತೇವೆ. ಪೊಲೀಸ್ ಠಾಣೆಗಳಿಗೆ ಮುತ್ತಿಗೆ ಹಾಕುವ ಹೋರಾಟಕ್ಕೂ ಮುಂದಾಗುತ್ತೇವೆ" ಎಂದು ವಿಜಯೇಂದ್ರ ಎಚ್ಚರಿಸಿದರು. ಎಸ್‌ಐಟಿ ಸೇರಿದಂತೆ ಯಾವುದೇ ಕ್ರಮಕ್ಕೂ ಹೆದರುವುದಿಲ್ಲ ಎಂದು ಹೇಳಿದ ಅವರು, ಸರ್ಕಾರ ಕಾನೂನುಬದ್ಧವಾಗಿ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

# 'ಕಿವುಡರಿಗೆ ಕರುಣೆ ಬೇಡ, ಸಮಾನ ಅವಕಾಶ ಮತ್ತು ಸಹಕಾರ ನೀಡಿ'



● ವಿಕ್ರಮ ವಾಹಿನಿ | ಬೆಂಗಳೂರು

ಕಿವುಡರಿಗೆ ಕರುಣೆ ತೋರುವುದಕ್ಕಿಂತ ಸಮಾಜದಿಂದ ಸಹಕಾರ, ಪ್ರೋತ್ಸಾಹ ಹಾಗೂ ಸಮಾನ ಅವಕಾಶ ಕಲ್ಪಿಸುವ ಅಗತ್ಯವಿದೆ. ಅವರ ಸಮಸ್ಯೆಗಳಿಗೆ ಸ್ಪಂದಿಸುವುದು ಸಮಾಜದ ಜವಾಬ್ದಾರಿಯಾಗಿದೆ ಎಂದು ಮಾಜಿ ಸಚಿವ ಹಾಗೂ ಶಾಸಕ ದಿನೇಶ್ ಗುಂಡೂರಾವ್ ಹೇಳಿದರು. ನಗರದ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕಿವುಡರ ಕ್ಷೇಮಾಭಿವೃದ್ಧಿ ಸಂಘದ 10ನೇ ವಾರ್ಷಿಕೋತ್ಸವ ಹಾಗೂ ಅಂತಾರಾಷ್ಟ್ರೀಯ ಕಿವುಡರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಕಿವುಡರು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢರಾಗಿದ್ದು, ಸೂಕ್ತ ತರಬೇತಿ ಹಾಗೂ ಅವಕಾಶ ದೊರೆತರೆ ಎಲ್ಲ ಕ್ಷೇತ್ರಗಳಲ್ಲೂ ಸಾಧನೆ ಮಾಡಬಲ್ಲರು. ವಿಶೇಷಚೇತನರ ಅಗತ್ಯತೆಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರಗಳು ವಿಶೇಷ ಯೋಜನೆಗಳನ್ನು ರೂಪಿಸಬೇಕು. ತಾವು ಆರೋಗ್ಯ ಸಚಿವರಾಗಿದ್ದ ಸಂದರ್ಭದಲ್ಲಿ ಕಾಕ್ಲಿಯರ್ ಇಂಪ್ಲಾಂಟ್ ಚಿಕಿತ್ಸೆಗೆ ಸಂಬಂಧಿಸಿದಂತೆ ವೈಜ್ಞಾನಿಕ ಹಾಗೂ ಪರಿಣಾಮಕಾರಿ ಕ್ರಮಗಳ ಕುರಿತು ಸಲಹೆಗಳನ್ನು ನೀಡಿದ್ದಾಗಿ ತಿಳಿಸಿದರು.

ಪ್ರತಿ ಜಿಲ್ಲೆಯಲ್ಲಾದರೂ ಕೆಲವು ಶಾಲೆಗಳ ಶಿಕ್ಷಕರಿಗೆ ಕಿವುಡ ಮಕ್ಕಳಿಗೆ ಬೋಧಿಸುವ ಹಾಗೂ ಸಂಜ್ಞಾ ಭಾಷೆ ಬಳಸುವ ಕುರಿತು ತರಬೇತಿ ನೀಡಬೇಕು. ಇದರಿಂದ ಅನೇಕ ಮಕ್ಕಳಿಗೆ ಅನುಕೂಲವಾಗಲಿದೆ. ಈ ವಿಷಯವನ್ನು ಶಿಕ್ಷಣ ಸಚಿವರೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದರು. ಕಿವುಡರನ್ನು ಸಮಾಜದಲ್ಲಿ ಅಪಹಾಸ್ಯ ಮಾಡದೆ, ಅವರಲ್ಲಿ ಆತ್ಮವಿಶ್ವಾಸ ಮತ್ತು ಮಾನಸಿಕ ಸ್ಥೈರ್ಯ ತುಂಬಬೇಕು. ಅವರಿಗೆ ಸೂಕ್ತ ಅವಕಾಶ ಕಲ್ಪಿಸಿದರೆ ಸ್ವಾವಲಂಬಿ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದರು.

ಸಂಘವು ಕಿವುಡರ ಕಲ್ಯಾಣಕ್ಕಾಗಿ ಉಚಿತ ಶಿಕ್ಷಣ, ಅರ್ಹರಿಗೆ ಚಾಲನಾ ಪರವಾನಗಿ, ಸಾಮಾನ್ಯ ಶಾಲೆಗಳ ಶಿಕ್ಷಕರಿಗೆ ಸಂಜ್ಞಾ ಭಾಷೆ ತರಬೇತಿ ಹಾಗೂ ಬ್ಯಾಂಕ್ ಸಾಲ ಸೌಲಭ್ಯ ಸೇರಿದಂತೆ ಹಲವು ಬೇಡಿಕೆಗಳನ್ನು ಒಳಗೊಂಡ ಮನವಿ ಸಲ್ಲಿಸಿದೆ. ಈ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು, ಮುಂದಿನ ವಿಧಾನಮಂಡಲ ಅಧಿವೇಶನದಲ್ಲಿಯೂ ಪ್ರಸ್ತಾಪಿಸುವುದಾಗಿ ದಿನೇಶ್ ಗುಂಡೂರಾವ್ ಭರವಸೆ ನೀಡಿದರು.

ಕಿವುಡರ ಭಾವನೆಗಳಿಗೆ ಧ್ವನಿಯಾಗಿ ನಿಲ್ಲುವುದರ ಜತೆಗೆ ಅವರ ಸಮಸ್ಯೆಗಳ ಪರಿಹಾರಕ್ಕೆ ಸದಾ ಸಹಕಾರ ನೀಡುವುದಾಗಿ ತಿಳಿಸಿದರು.

ಸಂಘದ ಅಧ್ಯಕ್ಷ ಕೆ.ಎಚ್. ಶಂಕರ್, ಪದಾಧಿಕಾರಿಗಳು ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಸಂಘದ ಸದಸ್ಯರು ಉಪಸ್ಥಿತರಿದ್ದರು.

# ಗಾಂಧಿ ವೃದ್ಧಾಶ್ರಮದಲ್ಲಿ ಸರಳವಾಗಿ ಗಾಂಧಿ ಜಯಂತಿ ಆಚರಿಸಿದ ಡಾ. ಸಾತ್ವಿಕ್ ದಂಪತಿ

● ವಿಕ್ರಮ ವಾಹಿನಿ | ಬೆಂಗಳೂರು

ಹೃದ್ರೋಗ ತಜ್ಞ ಹಾಗೂ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ. ಸಿ.ಎನ್. ಮಂಜುನಾಥ್ ಅವರ ಪುತ್ರ ಡಾ. ಸಾತ್ವಿಕ್ ಅವರು ತಮ್ಮ ಧರ್ಮಪತ್ನಿಯೊಂದಿಗೆ ನಗರದ ಮಾಗಡಿ ರಸ್ತೆಯಲ್ಲಿರುವ ಗಾಂಧಿ ವೃದ್ಧಾಶ್ರಮಕ್ಕೆ ಭೇಟಿ ನೀಡಿ, ಹಿರಿಯ ನಾಗರಿಕರೊಂದಿಗೆ ಸರಳವಾಗಿ ಗಾಂಧಿ ಜಯಂತಿ ಆಚರಿಸಿದರು.

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಅಳಿಯರಾಗಿರುವ ಡಾ. ಸಿ.ಎನ್. ಮಂಜುನಾಥ್ ಅವರ ಪುತ್ರರಾಗಿರುವ ಡಾ. ಸಾತ್ವಿಕ್, ಯಾವುದೇ ಆಡಂಬರವಿಲ್ಲದೆ ಆಶ್ರಮದ ಹಿರಿಯರೊಂದಿಗೆ ಸಮಯ ಕಳೆದರು. ಈ ಸಂದರ್ಭದಲ್ಲಿ ಆಶ್ರಮದ ಹಿರಿಯ ನಾಗರಿಕರಿಗೆ ಭೋಜನದ ವ್ಯವಸ್ಥೆ ಮಾಡಿದ ಡಾ. ಸಾತ್ವಿಕ್ ದಂಪತಿ, ಸ್ವತಃ ತಮ್ಮ ಕೈಯಾರೆ ಹಿರಿಯರಿಗೆ ಊಟ ಬಡಿಸಿದರು. ಬಳಿಕ ಅವರೊಂದಿಗೆ ಕುಳಿತು ಭೋಜನ ಸ್ವೀಕರಿಸಿ, ಹಿರಿಯರ ಆರೋಗ್ಯ ಹಾಗೂ ಯೋಗಕ್ಷೇಮ ವಿಚಾರಿಸಿದರು. ಮುಂದಿನ ದಿನಗಳಲ್ಲಿಯೂ ಆಶ್ರಮದ ಹಿರಿಯ ನಾಗರಿಕರ ಸೇವೆ ಮತ್ತು ಕಲ್ಯಾಣಕ್ಕೆ ತಮ್ಮಿಂದಾದ ಸಹಾಯ–ಸಹಕಾರ ನೀಡುವುದಾಗಿ ಡಾ. ಸಾತ್ವಿಕ್ ಭರವಸೆ ನೀಡಿದರು.

ಡಾ. ಸಾತ್ವಿಕ್ ದಂಪತಿಯನ್ನು ಆಶ್ರಮದ ಅಧ್ಯಕ್ಷೆ ಶ್ರೀಮತಿ ಲಕ್ಷ್ಮೀದೇವಿ ಹಾಗೂ ನಿರ್ವಾಹಕಿ ಜ್ಯೋತಿ



ಅವರು ಆತ್ಮೀಯವಾಗಿ ಬರಮಾಡಿಕೊಂಡರು. ಆಶ್ರಮದ ಸಂಸ್ಥಾಪಕರಾದ ಡಾ. ಲಯನ್ ಉಗ್ರಯ್ಯ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಹಿರಿಯರೊಂದಿಗೆ ಆತ್ಮೀಯವಾಗಿ ಬೆರೆತು, ಅವರೊಂದಿಗೆ ಊಟ ಮಾಡಿ ಸಮಯ ಕಳೆದ ಡಾ. ಸಾತ್ವಿಕ್ ದಂಪತಿಯ ಸರಳತೆ ಮತ್ತು ಸೇವಾ ಮನೋಭಾವಕ್ಕೆ ಆಶ್ರಮದ ಹಿರಿಯ ನಾಗರಿಕರು ಹಾಗೂ ಸಿಬ್ಬಂದಿ ಕೃತಜ್ಞತೆ ವ್ಯಕ್ತಪಡಿಸಿದರು.

ಹಿರಿಯರೊಂದಿಗೆ ಸಮಯ ಕಳೆಯುವ ಮೂಲಕ ಗಾಂಧೀಜಿಯವರ ಸರಳತೆ, ಮಾನವೀಯತೆ ಹಾಗೂ ಸೇವಾ ಸಂದೇಶವನ್ನು ಸ್ಮರಿಸಿದ ಈ ಆಚರಣೆ ವಿಶೇಷವಾಗಿ ಗಮನ ಸೆಳೆಯಿತು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ

# ರಾಜ್ಯದ 217 ತಾಲೂಕುಗಳು ಬರಪೀಡಿತ: ರೂ 7,142 ಕೋಟಿ ಪರಿಹಾರಕ್ಕೆ ಮನವಿ

**ರಾಜ್ಯದ 217 ತಾಲೂಕು ಬರಪೀಡಿತ; 177 ತಾಲೂಕುಗಳಲ್ಲಿ ರೂ 46,324.50 ಕೋಟಿ ಬೆಳೆ ನಷ್ಟದ ಅಂದಾಜು. ಎನ್‌ಡಿಆರ್‌ಎಫ್‌ನಡಿ ರೂ 7,142.64 ಕೋಟಿ ಪರಿಹಾರಕ್ಕೆ ಮನವಿ; ಕುಡಿಯುವ ನೀರು, ಬೆಳೆ ಹಾನಿ ಹಾಗೂ ರೈತರ ನೆರವಿಗೆ ಹೆಚ್ಚುವರಿ ಕೇಂದ್ರ ಸಹಾಯಕ್ಕೆ ಜಿ. ಪರಮೇಶ್ವರ ಆಗ್ರಹ.**

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದಲ್ಲಿ ತೀವ್ರ ಬರಗಾಲದಿಂದ ಕೃಷಿ, ತೋಟಗಾರಿಕೆ, ಕುಡಿಯುವ ನೀರು ಹಾಗೂ ಗ್ರಾಮೀಣ ಜನರ ಜೀವನೋಪಾಯದ ಮೇಲೆ ಗಂಭೀರ ಪರಿಣಾಮ ಉಂಟಾಗಿದ್ದು, ವಸ್ತುನಿಷ್ಠ ಮೌಲ್ಯಮಾಪನ ನಡೆಸಿ ಶೀಘ್ರ ಪರಿಹಾರ ಒದಗಿಸುವಂತೆ ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ಅವರು ಕೇಂದ್ರದ ಅಂತರ್‌ಸಚಿವಾಲಯ ತಂಡಕ್ಕೆ ಮನವಿ ಮಾಡಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ಕೃಷ್ಣ ಗೃಹಕಚೇರಿಯಲ್ಲಿ ಶನಿವಾರ ನಡೆದ ಸಭೆಯಲ್ಲಿ ಕೇಂದ್ರ ತಂಡವನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ 240 ತಾಲೂಕುಗಳ ಪೈಕಿ 217 ತಾಲೂಕುಗಳನ್ನು ಈಗಾಗಲೇ ಬರಪೀಡಿತ ಎಂದು ಘೋಷಿಸಲಾಗಿದೆ. ಮೊದಲ ಹಂತದಲ್ಲಿ ಮೌಲ್ಯಮಾಪನ ನಡೆಸಿದ 177 ತಾಲೂಕುಗಳ ಸುಮಾರು 47.09 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ರೂ 46,324.50 ಕೋಟಿ ನಷ್ಟದ ಅಂದಾಜು ಮಾಡಲಾಗಿದೆ ಎಂದು ತಿಳಿಸಿದರು.



**ರೂ 7,142 ಕೋಟಿ ಪರಿಹಾರಕ್ಕೆ ಬೇಡಿಕೆ:** ಮೊದಲ ಹಂತದಲ್ಲಿ 101 ಬರಪೀಡಿತ ತಾಲೂಕುಗಳಿಗೆ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿ (ಎನ್‌ಡಿಆರ್‌ಎಫ್) ಅಡಿಯಲ್ಲಿ ರೂ 3,705.30 ಕೋಟಿ ನೆರವು ಕೋರಿ ರಾಜ್ಯ ಸರ್ಕಾರ ಮನವಿ ಸಲ್ಲಿಸಿತ್ತು. ಬಳಿಕ ಹೆಚ್ಚುವರಿಯಾಗಿ 76 ತಾಲೂಕುಗಳಿಗೆ ರೂ 3,437.34 ಕೋಟಿ ನೆರವು ಕೋರಿ ಅಕ್ಟೋಬರ್ 1ರಂದು ಪೂರಕ ಮನವಿ ಸಲ್ಲಿಸಲಾಗಿದೆ. ಒಟ್ಟಾರೆ 177 ತಾಲೂಕುಗಳಿಗೆ ರೂ 7,142.64 ಕೋಟಿ ಪರಿಹಾರ ನೀಡುವಂತೆ ಕೇಂದ್ರವನ್ನು ಕೋರಲಾಗಿದೆ ಎಂದರು.

ರಾಜ್ಯವು ಬರ ನಿರ್ವಹಣಾ ಕೈಪಿಡಿಯಲ್ಲಿನ ಎಲ್ಲ ಮಾನದಂಡಗಳನ್ನು ಅನುಸರಿಸಿಯೇ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಅಂತಿಮ ಮೌಲ್ಯಮಾಪನದಲ್ಲಿ ಹೆಚ್ಚುವರಿಯಾಗಿ ಬರಪೀಡಿತವೆಂದು ಘೋಷಿಸಿರುವ 40 ತಾಲೂಕುಗಳು ಹಾಗೂ ಮುಂದಿನ ದಿನಗಳಲ್ಲಿ ಗುರುತಾಗುವ ಬೆಳೆ ಹಾನಿಯನ್ನೂ ಪರಿಗಣಿಸಬೇಕು. ಒಟ್ಟು ಬೆಳೆ ಹಾನಿ ಪ್ರದೇಶ 55 ಲಕ್ಷ ಹೆಕ್ಟೇರ್ ತಲುಪುವ ಸಾಧ್ಯತೆಯಿದೆ ಎಂದು ತಿಳಿಸಿದರು.

**1956ರ ಬಳಿಕ ಎರಡನೇ ಅತಿ ಕಡಿಮೆ ಮಳೆ:** 2026ರ ನೈಋತ್ಯ ಮುಂಗಾರು ಅವಧಿಯಲ್ಲಿ ರಾಜ್ಯದಲ್ಲಿ ಶೇ.35ರಷ್ಟು ಮಳೆ ಕೊರತೆಯಾಗಿದೆ. ಕೇವಲ 551 ಮಿ.ಮೀ. ಮಳೆಯಾಗಿದ್ದು, 1956ರ ಬಳಿಕ ದಾಖಲಾದ ಎರಡನೇ ಅತಿ ಕಡಿಮೆ ಮುಂಗಾರು ಮಳೆಯಾಗಿದೆ. 31 ಜಿಲ್ಲೆಗಳ ಪೈಕಿ 30 ಜಿಲ್ಲೆಗಳಲ್ಲಿ ಹಾಗೂ 240 ತಾಲೂಕುಗಳ ಪೈಕಿ 209 ತಾಲೂಕುಗಳಲ್ಲಿ ಮಳೆ ಕೊರತೆ ದಾಖಲಾಗಿದೆ.

**ಕೇಂದ್ರದಿಂದ ಸ್ಪಂದನೆ ಇಲ್ಲ:** ಬರ ಪರಿಹಾರಕ್ಕಾಗಿ ಪ್ರಧಾನಿ, ಕೇಂದ್ರ ಗೃಹ ಸಚಿವರು ಹಾಗೂ ಕೃಷಿ ಸಚಿವರಿಗೆ ರಾಜ್ಯ ಸರ್ಕಾರ ಹಲವು ಬಾರಿ ಪತ್ರ ಬರೆದಿದ್ದರೂ ಇದುವರೆಗೆ ಪ್ರತಿಕ್ರಿಯೆ ಬಂದಿಲ್ಲ ಎಂದು ಪರಮೇಶ್ವರ ಅಸಮಾಧಾನ ವ್ಯಕ್ತಪಡಿಸಿದರು. ಸಂಬಂಧಪಟ್ಟ ಕೇಂದ್ರ ಸಚಿವರಿಗೂ ಮನವಿ ಸಲ್ಲಿಸಲಾಗಿದೆ. ರಾಜ್ಯದ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿ ಪರಿಹಾರ ಕಾರ್ಯಗಳಿಗೆ ನೆರವಾಗಬೇಕು ಎಂದು ಕೋರಿದರು.

**ಕುಡಿಯುವ ನೀರಿಗೆ ರೂ 306 ಕೋಟಿ ಬಿಡುಗಡೆ**

ಬರದಿಂದ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದ್ದು, ಮುಂಬರುವ ಬೇಸಿಗೆಯಲ್ಲಿ ಮತ್ತಷ್ಟು ಬಿಗಡಾಯಿಸುವ ಆತಂಕವಿದೆ. ಪ್ರಸ್ತುತ 227 ಟ್ಯಾಂಕರ್‌ಗಳು ಹಾಗೂ ಬಾಡಿಗೆಗೆ ಪಡೆದ 720 ಕೊಳವೆಬಾವಿಗಳ ಮೂಲಕ 861 ಗ್ರಾಮೀಣ ಪ್ರದೇಶಗಳಿಗೆ ನೀರು ಪೂರೈಸಲಾಗುತ್ತಿದೆ.

ಮುಂಬರುವ ತಿಂಗಳುಗಳಲ್ಲಿ 2,300ಕ್ಕೂ ಹೆಚ್ಚು ಗ್ರಾಮ ಪಂಚಾಯಿತಿಗಳಲ್ಲಿ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆಯಿದೆ.

ಕುಡಿಯುವ ನೀರು ಪೂರೈಕೆ ಹಾಗೂ ತುರ್ತು ಕ್ರಮಗಳಿಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ರಾಜ್ಯ ಸರ್ಕಾರ ರೂ 306 ಕೋಟಿ ಬಿಡುಗಡೆ ಮಾಡಿದೆ. ನೀರಿನ ಲಭ್ಯತೆಯೇ ಪ್ರಮುಖ ಸವಾಲಾಗಿರುವುದರಿಂದ ಕೇಂದ್ರದ ಹೆಚ್ಚುವರಿ ನೆರವು ಅಗತ್ಯವಿದೆ ಎಂದು ತಿಳಿಸಿದರು.

**ರೈತರಿಗೆ ರೂ 2,500 ತಕ್ಷಣದ ನೆರವು:** ಬರಪೀಡಿತ ರೈತರಿಗೆ ತಲಾ ರೂ 2,500 ತಕ್ಷಣದ ಇನ್‌ಪುಟ್ ಸಬ್ಸಿಡಿ ನೀಡಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಬೆಳೆ ರಕ್ಷಣೆ, ಮೇವು ಪೂರೈಕೆ, ಜಾನುವಾರುಗಳ ಸಂರಕ್ಷಣೆ ಹಾಗೂ ಗ್ರಾಮೀಣ ಉದ್ಯೋಗ ಕಲ್ಪಿಸುವ ಕ್ರಮಗಳನ್ನೂ ಕೈಗೊಳ್ಳಲಾಗಿದೆ. ಈ ವರ್ಷ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ 37.50 ಲಕ್ಷ ರೈತರು ನೋಂದಣಿಯಾಗಿದ್ದು, ಅರ್ಹ ರೈತರಿಗೆ ಬೆಳೆ ವಿಮೆ ಪರಿಹಾರವನ್ನು ವಿಳಂಬವಿಲ್ಲದೆ ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಜತೆಗೆ, ಕೃಷಿ ಪರಿಕರಗಳ ವೆಚ್ಚಕ್ಕೆ ಅನುಗುಣವಾಗಿ ಇನ್‌ಪುಟ್ ಸಬ್ಸಿಡಿ ಮಾನದಂಡಗಳನ್ನು ಪರಿಷ್ಕರಿಸಬೇಕು. ಬರಪೀಡಿತ ರೈತರ ಸಾಲ ಮರುಹೊಂದಾಣಿಕೆ ಹಾಗೂ ಇತರ ಆರ್ಥಿಕ ನೆರವು ಒದಗಿಸುವಂತೆ ಬ್ಯಾಂಕುಗಳಿಗೆ ಸೂಚಿಸಬೇಕು. ಅಂತಿಮ ಮೌಲ್ಯಮಾಪನದಲ್ಲಿ ಎಲ್ಲ ಬಾಧಿತ ತಾಲೂಕುಗಳನ್ನು ಸೇರಿಸಿ, ವಾಸ್ತವ ಪರಿಸ್ಥಿತಿಗೆ ಅನುಗುಣವಾಗಿ ನ್ಯಾಯಯುತ ಪರಿಹಾರ ದೊರಕಿಸಿಕೊಡಬೇಕು ಎಂದು ಕೇಂದ್ರ ತಂಡವನ್ನು ಒತ್ತಾಯಿಸಿದರು.

## ಕೃಷಿ ಹೊಂಡದಲ್ಲಿ ಮುಳುಗಿ ತಾತ, ಇಬ್ಬರು ಮೊಮ್ಮಕ್ಕಳ ದುರ್ಮರಣ

● ವಿಕ್ರಮ ವಾಹಿನಿ | ಚಿಕ್ಕಬಳ್ಳಾಪುರ

ಜಮೀನಿನಲ್ಲಿರುವ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಪೂಜೆಗೆ ತೆರಳಿದ್ದ ತಾತ ಹಾಗೂ ಇಬ್ಬರು ಮೊಮ್ಮಕ್ಕಳು ಕೃಷಿ ಹೊಂಡದಲ್ಲಿ ಮುಳುಗಿ ಮೃತಪಟ್ಟಿರುವ ಘಟನೆ ಚಿಂತಾಮಣಿ ತಾಲೂಕಿನ ಹುಸೇನಪುರ ಗ್ರಾಮದಲ್ಲಿ ನಡೆದಿದೆ.

ಮುನಿನಾರಾಯಣಪ್ಪ (60) ಹಾಗೂ ಅವರ ಮೊಮ್ಮಕ್ಕಳಾದ ಯಶ್ವಿನ್ ಮತ್ತು ಪ್ರಜ್ವಲ್ ಮೃತಪಟ್ಟವರು. ಶನಿವಾರ ಬೆಳಿಗ್ಗೆ ಮೂವರೂ ಜಮೀನಿಗೆ ತೆರಳಿದ್ದು, ಸಂಜೆಯಾದರೂ ಮನೆಗೆ ಮರಳದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಹುಡುಕಾಟ ನಡೆಸಿದ್ದಾರೆ. ಈ ವೇಳೆ ದೇವಸ್ಥಾನದ ಸಮೀಪದ ಕೃಷಿ ಹೊಂಡದಲ್ಲಿ ಮೂವರ ಶವಗಳು ಪತ್ತೆಯಾಗಿವೆ. ಮಕ್ಕಳು ಹೊಂಡಕ್ಕೆ ಬಿದ್ದಾಗ ಅವರನ್ನು ರಕ್ಷಿಸಲು ಹೋದ ತಾತನೂ ಮುಳುಗಿರಬಹುದು ಎಂದು ಶಂಕಿಸಲಾಗಿದೆ. ಚಿಂತಾಮಣಿ ಗ್ರಾಮಾಂತರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಮೃತದೇಹಗಳನ್ನು ಹೊರತೆಗೆದು ಚಿಂತಾಮಣಿ ಸಾರ್ವಜನಿಕ ಆಸ್ಪತ್ರೆಯ ಶವಾಗಾರಕ್ಕೆ ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಹೊಂಡದ ಸಮೀಪ ವಿದ್ಯುತ್ ಸಂಪರ್ಕವೂ ಇದ್ದ ಹಿನ್ನೆಲೆಯಲ್ಲಿ ಅವಘಡಕ್ಕೆ ನಿಖರ ಕಾರಣವೇನು ಎಂಬ ಬಗ್ಗೆ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

## ಮತಗಳ್ಳತನ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

● ವಿಕ್ರಮ ವಾಹಿನಿ | ಬೆಂಗಳೂರು

ನಾಗಪುರದಲ್ಲಿರುವ ಚುನಾವಣಾಧಿಕಾರಿಯಲ್ಲಿ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದಲ್ಲಿ ವೋಟ್ ಚೋರಿ(ಮತಗಳ್ಳತನ)ಕುರಿತು ಮಹಾಲಕ್ಷ್ಮೀಲೇಔಟ್ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ವತಿಯಿಂದ ಪ್ರತಿಭಟನೆ ಮತ್ತು ಮನವಿ ಪತ್ರ ಸಲ್ಲಿಕೆ.

ಮಾಜಿ ಶಾಸಕ ನೆ.ಲ.ನರೇಂದ್ರಬಾಬು, ರಾಜ್ಯ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಹೆಚ್.ಎಸ್. ಮಂಜುನಾಥಗೌಡ,ಕಾಂಗ್ರೆಸ್ ಪಕ್ಷದ ಮುಖಂಡರು, ನಿಕಟಪೂರ್ವ ಬಿಬಿಎಂಪಿ ಸದಸ್ಯ ಎಸ್.ಕೇಶವಮೂರ್ತಿ, ಆಡಳಿತ ಪಕ್ಷದ ಮಾಜಿ ನಾಯಕ ಎಮ್.ಶಿವರಾಜು, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರುಗಳಾದ ಪರಿಸರ ರಾಮಕೃಷ್ಣ, ನಟರಾಜ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಜಿ.ಸುಧೀಂದ್ರ, ಕಾಂಗ್ರೆಸ್ ಪಕ್ಷ ಮುಖಂಡ ಜನಾರ್ಧನ್ ಮತ್ತು ಕಾಂಗ್ರೆಸ್ ಪಕ್ಷದ ಮುಖಂಡರುಗಳು ಕಾರ್ಯಕರ್ತರು ಭಾಗವಹಿಸಿದ್ದರು.



ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ 'ವೋಟ್ ಚೋರಿ' ನಡೆಯುತ್ತಿರುವ ಕುರಿತು ಗಂಭೀರ ಆರೋಪಗಳು ಕೇಳಿಬಂದಿದ್ದು, ವಿಶೇಷವಾಗಿ *ಅಲ್ಪಸಂಖ್ಯಾತ ಮತ್ತು ಎಸ್.ಸಿ/ಎಸ್.ಟಿ ಹಾಗೂ ಹಿಂದುಳಿದ ವರ್ಗದ ಪ್ರದೇಶಗಳಲ್ಲಿ ಮತದಾರರ ಹೆಸರನ್ನು ಅಳಿಸುವ ಉದ್ದೇಶದಿಂದ ಕೆಲ ವ್ಯಕ್ತಿಗಳು ಸುಳ್ಳು/ ಆಧಾರರಹಿತವಾಗಿ ಫಾರಂ–7 ಅರ್ಜಿಗಳನ್ನು ಸಲ್ಲಿಸಿರುವುದು ಗಮನಕ್ಕೆ ಬಂದಿದೆ.

ಈ ಪ್ರಕರಣದ ಕುರಿತು ಸಂಪೂರ್ಣ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಮತ್ತು ಅಕ್ರಮವಾಗಿ ಮತದಾರರ ಹೆಸರುಗಳನ್ನು ಅಳಿಸಲು ಪ್ರಯತ್ನಿಸಿರುವವರ ವಿರುದ್ಧ ಈಖಖ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಪ್ರತಿಭಟನೆ.

ಕ್ಷೇತ್ರದ ಚುನಾವಣಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಮತದಾರರ ಹಕ್ಕುಗಳ ರಕ್ಷಣೆ ಹಾಗೂ ಮತದಾರರ ಪಟ್ಟಿಯ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳುವಂತೆ ಒತ್ತಾಯಿಸಲಾಯಿತು.

## ಖಾರಿಫ್ ಬರ ಅಧ್ಯಯನಕ್ಕೆ ರಾಜ್ಯಕ್ಕೆ ಕೇಂದ್ರ ತಂಡ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದಲ್ಲಿ ಉಂಟಾಗಿರುವ ಖಾರಿಫ್ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿಯನ್ನು ಪರಿಶೀಲಿಸಲು ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳ ಉನ್ನತಾಧಿಕಾರಿಗಳ ಅಂತರ ಸಚಿವಾಲಯದ ಕೇಂದ್ರ ತಂಡ (ಐಎಂಸಿಟಿ) ಶುಕ್ರವಾರದಿಂದ ಅ.6ರವರೆಗೆ ರಾಜ್ಯದಲ್ಲಿ ಪ್ರವಾಸ ಕೈಗೊಳ್ಳಲಿದೆ.

ಕೇಂದ್ರ ತಂಡವನ್ನು ಮೂರು ವಿಭಾಗಗಳಾಗಿ ವಿಂಗಡಿಸಲಾಗಿದ್ದು, ಬರಪೀಡಿತ 12 ಜಿಲ್ಲೆಗಳಲ್ಲಿ ಸ್ಥಳ ಪರಿಶೀಲನೆ ನಡೆಸಲಿದೆ. ಜಂಟಿ ಕಾರ್ಯದರ್ಶಿ ಅಜೀತ್ ಕುಮಾರ್ ಸಾಹು ನೇತೃತ್ವದ ತಂಡ–1 ತುಮಕೂರು, ಚಿತ್ರದುರ್ಗ, ದಾವಣಗೆರೆ ಮತ್ತು ವಿಜಯನಗರ ಜಿಲ್ಲೆಗಳಿಗೆ ಭೇಟಿ ನೀಡಲಿದೆ.

ಸಹಾಯಕ ಆಯುಕ್ತ ಡಾ. ಸುದಮ್ ಬಾಗ್ ನೇತೃತ್ವದ ತಂಡ–2 ಹಾಸನ, ಮೈಸೂರು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿ ಅವಲೋಕಿಸಲಿದೆ. ನಿರ್ದೇಶಕ ಡಾ. ಮನ್ ಸಿಂಗ್ ನೇತೃತ್ವದ ತಂಡ–3 ಯಾದಗಿರಿ, ರಾಯಚೂರು, ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಬೆಳೆ ಹಾನಿ ಹಾಗೂ ಬರದ ತೀವ್ರತೆ ಪರಿಶೀಲಿಸಲಿದೆ. ಸ್ಥಳ ಪರಿಶೀಲನೆ ಬಳಿಕ ಕೇಂದ್ರ ತಂಡವು ರಾಜ್ಯದಲ್ಲಿನ ಬೆಳೆ ಹಾನಿ, ಬರದ ಪರಿಣಾಮ ಹಾಗೂ ರೈತರ ಸಂಕಷ್ಟದ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಿದೆ.

## ಬಿಜೆಪಿ ದ್ವಂದ್ವ ನೀತಿ ಅನುಸರಿಸುತ್ತಿದೆ: ರಾಮಲಿಂಗಾ ರೆಡ್ಡಿ

● ವಿಕ್ರಮ ವಾಹಿನಿ | ಬೆಂಗಳೂರು

ಚುನಾವಣಾ ಆಯುಕ್ತರ ವಿರುದ್ಧ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸಿದಾಗ ವಿರೋಧಿಸಿದ್ದ ಬಿಜೆಪಿ ನಾಯಕರು, ಇದೀಗ ಪೊಲೀಸ್ ಆಯುಕ್ತರ ಕಚೇರಿ ಎದುರು ಧರಣಿ ನಡೆಸುತ್ತಿರುವುದು ದ್ವಂದ್ವ ನೀತಿಗೆ ಸಾಕ್ಷಿ ಎಂದು ಅರಣ್ಯ ಸಚಿವ ರಾಮಲಿಂಗಾ ರೆಡ್ಡಿ ಆರೋಪಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕಾಂಗ್ರೆಸ್ ಮಾಡಿದರೆ ತಪ್ಪು, ಬಿಜೆಪಿ ಮಾಡಿದರೆ ನ್ಯಾಯವೇ? ಎಂಬ ಪ್ರಶ್ನೆ ಹಾಕಿದ್ದಾರೆ. ಮತದಾರರ ಹಕ್ಕು ಹಾಗೂ ಸಂವಿಧಾನಿಕ ಮೌಲ್ಯಗಳ ರಕ್ಷಣೆಯ ಹೆಸರಿನಲ್ಲಿ ಬಿಜೆಪಿ ರಾಜಕೀಯ ಗಿಮಿಕ್ ನಡೆಸುತ್ತಿದೆ ಎಂದು ಟೀಕಿಸಿದ್ದಾರೆ.

ಚುನಾವಣಾ ಆಯುಕ್ತರನ್ನು ಮುಂದಿಟ್ಟುಕೊಂಡು ರಾಜಕೀಯ ಹಿತಾಸಕ್ತಿಗಾಗಿ ಹುನ್ನಾರ ನಡೆಸಲಾಗುತ್ತಿದೆ ಎಂದು ಆರೋಪಿಸಿದ ಅವರು, ಬಿಜೆಪಿ ಜವಾಬ್ದಾರಿಯುತ ವಿರೋಧ ಪಕ್ಷವಾಗಿ ವರ್ತಿಸಬೇಕು ಎಂದು ಸಲಹೆ ನೀಡಿದ್ದಾರೆ.

## 148 ಎಂಎಲ್‌ಡಿ ಸಾಮರ್ಥ್ಯದ 9 ಎಸ್‌ಟಿಪಿ ಕಾಮಗಾರಿ ಚುರುಕುಗೊಳಿಸಲು ಸೂಚನೆ

● ವಿಕ್ರಮ ವಾಹಿನಿ | ಬೆಂಗಳೂರು

ವಿಶ್ವಬ್ಯಾಂಕ್ ನೆರವಿನಡಿ ಬೆಂಗಳೂರಿನ ವಿವಿಧೆಡೆ ನಿರ್ಮಾಣವಾಗುತ್ತಿರುವ ಒಟ್ಟು 148 ಎಂಎಲ್‌ಡಿ ಸಾಮರ್ಥ್ಯದ ಒಂಬತ್ತು ತ್ಯಾಜ್ಯನೀರು ಸಂಸ್ಕರಣಾ ಘಟಕಗಳ (ಎಸ್‌ಟಿಪಿ) ಕಾಮಗಾರಿಗಳನ್ನು ಚುರುಕುಗೊಳಿಸಿ, ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯೂಎಸ್ಎಸ್‌ಬಿ) ಅಧ್ಯಕ್ಷೆ ಡಾ. ಎನ್. ಮಂಜುಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾವೇರಿ ಭವನದಲ್ಲಿ ವಿಶ್ವಬ್ಯಾಂಕ್ ಹಾಗೂ ಜಪಾನ್ ಅಂತರರಾಷ್ಟ್ರೀಯ ಸಹಕಾರ ಸಂಸ್ಥೆ (ಜೈಕಾ) ನೆರವಿನ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಇಬ್ಬಲೂರು, ಅಬ್ಬಿಗೆರೆ, ಯು.ಎಂ. ಕಾವಲ್, ಕೊಗಿಲು, ಅಂಜನಾಪುರ, ಚನ್ನಸಂದ್ರ, ಸೌಲ್‌ಕೆರೆ, ಹುಳಿಮಾವು ಹಾಗೂ ಚಿಕ್ಕಬೇಗೂರು ಪ್ರದೇಶಗಳಲ್ಲಿ ಒಟ್ಟು 148 ಎಂಎಲ್‌ಡಿ ಸಾಮರ್ಥ್ಯದ ಎಸ್‌ಟಿಪಿಗಳನ್ನು ನಿರ್ಮಿಸಲಾಗುತ್ತಿದೆ. ರಾಜರಾಜೇಶ್ವರಿ ನಗರ, ದಾಸರಹಳ್ಳಿ, ಬ್ಯಾಟರಾಯನಪುರ, ಬೊಮ್ಮನಹಳ್ಳಿ ಮತ್ತು ಮಹದೇವಪುರ ವಲಯಗಳಲ್ಲಿ ನಡೆಯುತ್ತಿರುವ ಎಸ್‌ಟಿಪಿ ಹಾಗೂ ಒಳಚರಂಡಿ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು.

ಎಲ್ಲ ಕಾಮಗಾರಿಗಳಿಗೂ ಸ್ಪಷ್ಟ ಕಾಲಮಿತಿ ನಿಗದಿಪಡಿಸಿ ವಿಳಂಬಕ್ಕೆ ಅವಕಾಶ ನೀಡದೆ ಪೂರ್ಣಗೊಳಿಸಬೇಕು. ಕಾಮಗಾರಿ ಅನುಷ್ಠಾನದ ಸಂದರ್ಭದಲ್ಲಿ ಸ್ಥಳೀಯ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವುದರ ಜತೆಗೆ ಕಾರ್ಮಿಕರ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಇದೇ ವೇಳೆ, ಜೈಕಾ ನೆರವಿನ ಕಾವೇರಿ ನೀರು ಸರಬರಾಜು ಯೋಜನೆಯ 6ನೇ ಹಂತಕ್ಕೆ ಅಂತಿಮ ರೂಪ ನೀಡಲಾಗಿದ್ದು, ಸಾಲ ಮಂಜೂರಾತಿಗೆ ಸಂಬಂಧಿಸಿದ ಅಂತಿಮ ಹಂತದ ಮಾತುಕತೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಯೋಜನೆಗೆ ಸರ್ಕಾರದ ಮಟ್ಟದಲ್ಲಿ ಒಪ್ಪಿಗೆ ದೊರೆತಿದ್ದು, ಅಗತ್ಯ ಪೂರ್ವಸಿದ್ಧತೆಗಳನ್ನು ಆರಂಭಿಸಲಾಗಿದೆ. ಬೆಂಗಳೂರಿನ ವಿವಿಧ ಪ್ರದೇಶಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಭವಿಷ್ಯದ ಕುಡಿಯುವ ನೀರಿನ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಯೋಜನೆ ಅನುಷ್ಠಾನಗೊಳಿಸಬೇಕು ಎಂದರು.

ಜೈಕಾ ಯೋಜನೆಯಡಿ ಪ್ರಗತಿಯಲ್ಲಿರುವ ಇತರ ಕಾಮಗಾರಿಗಳನ್ನು ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು. ಯಾವುದೇ ಕಾರಣಕ್ಕೂ ಕಾಮಗಾರಿಗಳು ಸ್ಥಗಿತಗೊಳ್ಳದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ನವೀನ ಯೋಜನೆಗಳು, ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದ ಮುಖ್ಯ ಅಭಿಯಂತರ ಸುಧೀರ್ ಸೇರಿದಂತೆ ವಿವಿಧ ಯೋಜನಾ ವಿಭಾಗಗಳ ಅಭಿಯಂತರರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಯುಜಿ ನೀಟ್: 3ನೇ ಸುತ್ತಿನ ತಾತ್ಕಾಲಿಕ ಫಲಿತಾಂಶ ಪ್ರಕಟ

● ವಿಕ್ರಮ ವಾಹಿನಿ | ಬೆಂಗಳೂರು

ಯುಜಿ ನೀಟ್ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಮೂರನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಪ್ರಕಟಿಸಿದೆ.

ಎಂಸಿಸಿ ಹಾಗೂ ಕೆಇಎ ಎರಡೂ ಕಡೆ ಸೀಟು ಪಡೆದಿರುವ ಅಭ್ಯರ್ಥಿಗಳು ಎಂಸಿಸಿ ಸೀಟು ಪಡೆಯಲು ಬಯಸಿದರೆ, ಅ.5ರ ಮಧ್ಯಾಹ್ನ 12 ಗಂಟೆಯೊಳಗೆ ಕೆಇಎ ವೆಬ್‌ಸೈಟ್‌ನಲ್ಲಿ 'ಚಾಯ್ಸ್–4' ಆಯ್ಕೆ ಮಾಡುವ ಮೂಲಕ ಶುಲ್ಕವಿಲ್ಲದೆ ಕೌನ್ಸೆಲಿಂಗ್‌ನಿಂದ ಹೊರಬರಬಹುದು ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

ಕೆಇಎ ಮೊದಲ ಅಥವಾ ಎರಡನೇ ಸುತ್ತಿನಲ್ಲಿ ಸೀಟು ಪಡೆದು ಪ್ರವೇಶ ಪಡೆದಿದ್ದು, ಇದೀಗ ಎಂಸಿಸಿ ಮೂರನೇ ಸುತ್ತಿನಲ್ಲಿ ಸೀಟು ದೊರೆತಿರುವ ಅಭ್ಯರ್ಥಿಗಳು ಅಲ್ಲಿಗೆ ತೆರಳಲು ಬಯಸಿದರೆ 10 ಸಾವಿರ ದಂಡ ಪಾವತಿಸಿ ಕೆಇಎ ಸೀಟು ರದ್ದುಪಡಿಸಿಕೊಳ್ಳಲು ಅ.5ರ ಮಧ್ಯಾಹ್ನ 12ರವರೆಗೆ ಅವಕಾಶವಿದೆ. ಇತರ ರಾಜ್ಯಗಳಲ್ಲಿ ಮೂರನೇ ಸುತ್ತಿನಲ್ಲಿ ಸೀಟು ಪಡೆದವರು ಅಥವಾ ಹಂಚಿಕೆಯಾದ ಸೀಟು ಬೇಡವೆಂದು ಕೌನ್ಸೆಲಿಂಗ್‌ನಿಂದ ಹೊರಬರಲು ಬಯಸುವವರು ಸಹ 10 ಸಾವಿರ ದಂಡ ಪಾವತಿಸಿ ಕೆಇಎ ಸೀಟು ರದ್ದುಪಡಿಸಿಕೊಳ್ಳಬಹುದು.

ಎಂಸಿಸಿ ಮೊದಲ ಮತ್ತು ಎರಡನೇ ಸುತ್ತಿನಲ್ಲಿ ಪ್ರವೇಶ ಪಡೆದಿದ್ದು, ಕೆಇಎ ಮೂರನೇ ಸುತ್ತಿನಲ್ಲಿ ಸೀಟು ಪಡೆದಿರುವ ಅಭ್ಯರ್ಥಿಗಳು ಕೆಇಎ ಸೀಟಿನಲ್ಲೇ ಪ್ರವೇಶ ಪಡೆಯಲು ಬಯಸಿದರೆ ಅ.5ರ ಮಧ್ಯಾಹ್ನ 12ರೊಳಗೆ ಅಗತ್ಯ ವಿವರಗಳೊಂದಿಗೆ keauthority_ka@nic.inಗೆ ಇ–ಮೇಲ್ ಮಾಡಬೇಕು.

ಸೀಟು ರದ್ದುಪಡಿಸಿಕೊಂಡು ಕೌನ್ಸೆಲಿಂಗ್‌ನಿಂದ ಹೊರಬಂದವರಿಗೆ ಮುಂದಿನ ಸುತ್ತುಗಳಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ. ರದ್ದಾದ ಸೀಟುಗಳನ್ನು ಇದೇ ಸುತ್ತಿನ ಮರುಹಂಚಿಕೆಗೆ ಪರಿಗಣಿಸಿ ಅಂತಿಮ ಫಲಿತಾಂಶ ಪ್ರಕಟಿಸಲಾಗುವುದು. ಈ ಸುತ್ತಿನ ಬಳಿಕ 'ಚಾಯ್ಸ್–4' ಆಯ್ಕೆಗೆ ಅವಕಾಶ ಇರುವುದಿಲ್ಲ ಎಂದು ಕೆಇಎ ತಿಳಿಸಿದೆ.

## ಪ್ರಜಾಸೇವೆ ಅಭಿಯಾನದಲ್ಲಿ ಕಾನೂನು ನೆರವು ಕೇಂದ್ರ: ಡಿ.ಕೆ. ಶಿವಕುಮಾರ್

● ವಿಕ್ರಮ ವಾಹಿನಿ | ಮೈಸೂರು

ನ್ಯಾಯಾಲಯಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಜನರಿಗೆ ಉಚಿತ ಕಾನೂನು ನೆರವು ಒದಗಿಸುವ ಉದ್ದೇಶದಿಂದ ಪ್ರಜಾಸೇವೆ ಅಭಿಯಾನದಡಿ ಪ್ರತ್ಯೇಕ ಕಾನೂನು ನೆರವು ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಪಿರಿಯಾಪಟ್ಟಣದಲ್ಲಿ ಶನಿವಾರ ಪ್ರಜಾಸೇವೆ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜನರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲೇ ಸಾಧ್ಯವಾದಷ್ಟು ಪರಿಹಾರ ಒದಗಿಸಲು ಸರ್ಕಾರವೇ ಜನರ ಮನೆಬಾಗಿಲಿಗೆ ತೆರಳುತ್ತಿದೆ. ಸೆ.5ರಂದು ಆರಂಭವಾದ ಪ್ರಜಾಸೇವೆ ಅಭಿಯಾನದಡಿ ಈಗಾಗಲೇ 620 ಕಡೆ ಕಾರ್ಯಕ್ರಮ ನಡೆಸಲಾಗಿದ್ದು, ಒಂದು ಲಕ್ಷಕ್ಕೂ ಹೆಚ್ಚು ಅರ್ಜಿಗಳು ಸ್ವೀಕರಿಸಲಾಗಿದೆ ಎಂದರು.

ಪಿಂಚಣಿ ಪಡೆಯಲು ನಿಗದಿಪಡಿಸಿದ್ದ ರೂ 32 ಸಾವಿರ ಆದಾಯ ಮಿತಿಯನ್ನು ರೂ 1.20 ಲಕ್ಷಕ್ಕೆ ಹೆಚ್ಚಿಸಿದ ಪರಿಣಾಮ 12 ಲಕ್ಷ ಪಿಂಚಣಿದಾರರಿಗೆ ಅನುಕೂಲವಾಗಿದೆ. ಜನರ ಸಮಸ್ಯೆಗಳನ್ನು ಪರಿಹರಿಸುವುದೇ ಸರ್ಕಾರದ ಉದ್ದೇಶ ಎಂದು ಶಿವಕುಮಾರ್ ಹೇಳಿದರು.



ರಾಜ್ಯದಲ್ಲಿ 217 ತಾಲ್ಲೂಕುಗಳು ಬರಪೀಡಿತವಾಗಿದ್ದು, ಬರ ಪರಿಸ್ಥಿತಿ ಎದುರಿಸಲು ಸರ್ಕಾರ ಸಿದ್ಧವಾಗಿದೆ. ಕೃಷಿ ಚಟುವಟಿಕೆಗಳಿಗೆ ನೆರವಾಗಲು ಟ್ರ್ಯಾಕ್ಟರ್ ಸಹಾಯಧನ ಹಾಗೂ ಎರಡು ತಾಲ್ಲೂಕುಗಳಲ್ಲಿ ನೇಗಿಲಯೋಗಿ ಯೋಜನೆಯಡಿ ಉಚಿತ ಉಳುಮೆ ವ್ಯವಸ್ಥೆ ಕಲ್ಪಿಸುವಂತೆ ಕೃಷಿ ಸಚಿವರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

16ರಿಂದ 35 ವರ್ಷದೊಳಗಿನ ಯುವಕರ ಪ್ರತಿಭೆ ಹೊರತರುವ ಉದ್ದೇಶದಿಂದ ಭಾರತ್ ಜೋಡೋ ಯುವಕ ಸಂಘಗಳನ್ನು ಸ್ಥಾಪಿಸಲಾಗುತ್ತಿದೆ. ಪ್ರತಿ ಸಂಘಕ್ಕೆ ವಾರ್ಷಿಕ ರೂ 10 ಲಕ್ಷ ಅನುದಾನ ನೀಡುವ ವ್ಯವಸ್ಥೆ ಮಾಡಲಾಗುತ್ತಿದ್ದು, ಮಾರ್ಗದರ್ಶಕರನ್ನೂ ನೇಮಿಸಲಾಗುವುದು. ರಾಜ್ಯದ ಪ್ರತಿಭಾವಂತ ಯುವಕರಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗುವುದು ಎಂದರು.

ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಅರ್ಹರ ಮತದಾನದ ಹಕ್ಕು ರಕ್ಷಿಸುವುದು ಸರ್ಕಾರದ ಜವಾಬ್ದಾರಿ. ಯಾವುದೇ ಅರ್ಹ ಮತದಾರರ ಹೆಸರು ಕೈತಪ್ಪದಂತೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ಜನರ ಸಮಸ್ಯೆ ಆಲಿಸಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಪ್ರಜಾಸೇವೆ ಕಾರ್ಯಕ್ರಮ ನಡೆಸುವಂತೆ ಸೂಚಿಸಲಾಗಿದೆ. ಶಾಸಕರು ತೆರಳಲು ಸಾಧ್ಯವಾಗದ ಸಂದರ್ಭದಲ್ಲಿ ಅಧಿಕಾರಿಗಳೇ ಗ್ರಾಮಗಳಿಗೆ ತೆರಳಿ ಅಹವಾಲು ಸ್ವೀಕರಿಸಬೇಕು. ಜನರು ಕಚೇರಿಗಳಿಗೆ ಅಲೆದಾಡುವ ಹಾಗೂ ಲಂಚ ನೀಡುವ ಪರಿಸ್ಥಿತಿ ಇರಬಾರದು ಎಂದು ಶಿವಕುಮಾರ್ ಹೇಳಿದರು.

ಅರಣ್ಯ, ಕಂದಾಯ, ವಸತಿ, ಲೋಕೋಪಯೋಗಿ, ಸಾರಿಗೆ, ಇಂಧನ, ನೀರಾವರಿ, ಸಮಾಜ ಕಲ್ಯಾಣ, ಆರೋಗ್ಯ ಸೇರಿದಂತೆ ಎಲ್ಲ ಇಲಾಖೆಗಳ ಅರ್ಜಿಗಳನ್ನು ಪ್ರಜಾಸೇವೆ ಕೇಂದ್ರಗಳಲ್ಲಿ ಸ್ವೀಕರಿಸಲಾಗುತ್ತಿದ್ದು, ಕಾನೂನುಬದ್ಧ ಅರ್ಜಿಗಳ ವಿಲೇವಾರಿಗೆ ಅಗತ್ಯ ಮಾರ್ಗದರ್ಶನ ನೀಡಲಾಗುವುದು ಎಂದರು.

## 10 ಗಂಟೆಯಲ್ಲಿ 20 ಎಕರೆ ಬಿತ್ತನೆ; ಜೋಡೆತ್ತುಗಳ ದಾಖಲೆ

● ವಿಕ್ರಮ ವಾಹಿನಿ | ಬಾಗಲಕೋಟೆ

ಟ್ರ್ಯಾಕ್ಟರ್‌ಗಳ ಭರಾಟೆಯ ನಡುವೆಯೂ ಜೋಡೆತ್ತುಗಳು 10 ಗಂಟೆಯಲ್ಲಿ 20 ಎಕರೆ ಬಿಳಿಜೋಳ ಬಿತ್ತನೆ ಮಾಡಿ ಗಮನ ಸೆಳೆದಿವೆ. ಬೀಳಗಿ ತಾಲೂಕಿನ ಗಿರಿಸಾಗರ ಗ್ರಾಮದ ರೈತರಾದ ಗುಂಡಪ್ಪ ನೀರುಗ್ಗಿ ಹಾಗೂ ಜಕ್ಕಪ್ಪ ನವಲಗನ್ ಅವರಿಗೆ ಸೇರಿದ ಜೋಡೆತ್ತುಗಳು ಬೆಳಿಗ್ಗೆ 5ರಿಂದ ಸಂಜೆ 3ರವರೆಗೆ ನಿರಂತರವಾಗಿ ಕೆಲಸ ಮಾಡಿ ಈ ಸಾಧನೆ ಮಾಡಿವೆ. ಸಾಮಾನ್ಯವಾಗಿ ಒಂದು ಜೋಡೆತ್ತು ದಿನಕ್ಕೆ 4ರಿಂದ 5 ಎಕರೆ ಬಿತ್ತನೆ ಮಾಡುತ್ತದೆ. ಆದರೆ ಈ ಜೋಡೆತ್ತುಗಳು ನಾಲ್ಕು ಪಟ್ಟು ಹೆಚ್ಚು ಪ್ರದೇಶದಲ್ಲಿ ಬಿತ್ತನೆ ಮಾಡಿ, ಯಾಂತ್ರಿಕ ಕೃಷಿಯ ನಡುವೆಯೂ ತಮ್ಮ ಸಾಮರ್ಥ್ಯ ಮೆರೆದಿವೆ.

## ಪೈಲಟ್ ಸ್ಮಿತ್ ಮಬ್ಬಾರ್ ಮೇಲಿನ ದಾಳಿ: ಜಾಗತಿಕ ಭದ್ರತಾ ಲೋಪದ ತನಿಖೆಗೆ ಆಗ್ರಹ

● ವಿಕ್ರಮ ವಾಹಿನಿ | ಬೆಂಗಳೂರು

ದುಬೈನಿಂದ ತೆಲ್ ಅವೀವ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನದಲ್ಲಿ ಭಾರತೀಯ ಕ್ಯಾಪ್ಟನ್ ಸ್ಮಿತ್ ಮಬ್ಬಾರ್ ಮೇಲೆ ಸಹ–ಪೈಲಟ್ ಹಮಾಮ್ ಅಲ್–ಹಮ್ಮಾಮಿ ನಡೆಸಿದ ದಾಳಿ ಹಾಗೂ ವಿಮಾನವನ್ನು ಅಪಾಯಕ್ಕೆ ಸಿಲುಕಿಸಿದ ಘಟನೆಗೆ ಸಂಬಂಧಿಸಿದಂತೆ ಅಂತಾರಾಷ್ಟ್ರೀಯ ವಿಮಾನಯಾನ ಭದ್ರತಾ ವ್ಯವಸ್ಥೆಯಲ್ಲಿನ ಲೋಪಗಳ ಕುರಿತು ಸಮಗ್ರ ತನಿಖೆ ನಡೆಯಬೇಕು ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆಗ್ರಹಿಸಿದ್ದಾರೆ.

ಗಂಭೀರ ಗಾಯಗಳ ನಡುವೆಯೂ ಪರಿಸ್ಥಿತಿಯನ್ನು ನಿಭಾಯಿಸಿ ವಿಮಾನದಲ್ಲಿದ್ದವರ ಸುರಕ್ಷತೆಗೆ ನೆರವಾದ ಕ್ಯಾಪ್ಟನ್ ಸ್ಮಿತ್ ಮಬ್ಬಾರ್ ಅವರ ಕಾರ್ಯವನ್ನು ಅವರು ಶ್ಲಾಘಿಸಿದರು.



ಘಟನೆಯನ್ನು ಯುಎಇ ಅಧಿಕಾರಿಗಳು ಭಯೋತ್ಪಾದನಾ ಕೃತ್ಯವೆಂದು ಪರಿಗಣಿಸಿ ತನಿಖೆ ನಡೆಸುತ್ತಿದ್ದು, ಹಮಾಮ್ ಅಲ್–ಹಮ್ಮಾಮಿ ಅವರ ಹಿಂದಿನ ಹಿನ್ನೆಲೆ ಹಾಗೂ ಭದ್ರತಾ ಎಚ್ಚರಿಕೆಗಳ ಬಗ್ಗೆಯೂ ಪರಿಶೀಲನೆ ನಡೆಯುತ್ತಿದೆ.

ಭಾರತೀಯ ಪೈಲಟ್‌ರನ್ನು ಗುರಿಯಾಗಿಸಿ ಕೊಂಡು ದುರುದ್ದೇಶಿತ ಸಂಚು ನಡೆದಿದೆಯೇ ಎಂಬುದೂ ತನಿಖೆಯಿಂದ ಸ್ಪಷ್ಟವಾಗಬೇಕು ಎಂದು ರವಿಕುಮಾರ್ ಹೇಳಿದ್ದಾರೆ.

ಅಂತಾರಾಷ್ಟ್ರೀಯ ವಿಮಾನಯಾನ ಸಂಸ್ಥೆಗಳಲ್ಲಿ ಸಿಬ್ಬಂದಿಯ ಹಿನ್ನೆಲೆ ಪರಿಶೀಲನೆ ಮತ್ತು ಭದ್ರತಾ ತಪಾಸಣಾ ವ್ಯವಸ್ಥೆಗಳನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಒತ್ತಾಯಿಸಿದ್ದಾರೆ.

ಘಟನೆಯ ಸಂಪೂರ್ಣ ತನಿಖೆ ನಡೆಸಿ ನಿಜಾಂಶಗಳನ್ನು ಬಹಿರಂಗಪಡಿಸಬೇಕು. ನಾಗರಿಕ ವಿಮಾನಯಾನ ಭದ್ರತೆಗೆ ಧಕ್ಕೆ ತರುವ ಕೃತ್ಯಗಳ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 180,